ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 59 RNI Number : KNKAN/25/A2770 06-03-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :59 ರಾಯಚೂರು 06-03-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ರಾಜ್ಯಸಭಾ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ ನಿತೀಶ್ ಕುಮಾರ್, ನಿತಿನ್ ನಬಿನ್

ಪಾಟ್ನಾ (ಬಿಹಾರ),ಮಾ.05-

ಬಿಹಾರ ಸಿಎಂ ನಿತೀಶ್ ಕುಮಾರ್ ಇಂದು ರಾಜ್ಯಸಭಾ ಸ್ಥಾನಕ್ಕೆ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಅವರ ಜೊತೆಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿರುವ ನಿತೀನ್ ನಬಿನ್ ಕೂಡ ನಾಮತ್ರ ಸಲ್ಲಿಕೆ ಮಾಡಿದ್ದಾರೆ.

ಎನ್‌ಡಿಎ ಮೈತ್ರಿಕೂಟದ ಭರ್ಜರಿ ಗೆಲುವಿನಿಂದಾಗಿ ನವೆಂಬರ್ ನಲ್ಲಿ ಬಿಹಾರ ಸಿಎಂ ಆಗಿ ಅಧಿಕಾರದ ಚುಕ್ಕಾಣಿ ಹಿಡಿದಿದ್ದ ಜೆಡಿಯು ನಾಯಕ ನಿತೀಶ್ ಕುಮಾರ್ ಮುಖ್ಯ ಮಂತ್ರಿ ಹುದ್ದೆಗೆ ರಾಜೀನಾಮೆ ನೀಡುವುದಾಗಿ ಈಗಾಗಲೇ ಘೋಷಣೆ ಮಾಡಿದ್ದಾರೆ.

ನಾಮಪತ್ರ ಸಲ್ಲಿಕೆ ವೇಳೆ ಹಾಜರಿದ್ದ ಕೇಂದ್ರ ಗೃಹ ಸಚಿವ ಅಮಿತ್ ಶಾ: ರಾಜ್ಯಸಭಾ ಸ್ಥಾನಕ್ಕೆ ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನವಾಗಿದ್ದು, ಈ ವೇಳೆ ಬಿಹಾರದಲ್ಲಿನ ಎನ್‌ಡಿಎ ನಾಯಕರ ನಾಮಪತ್ರ ಸಲ್ಲಿಕೆಯ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಟ್ನಾಕ್ಕೆ ಆಗಮಿಸಿದ್ದರು. ಪಾಟ್ನಾ ವಿಮಾನ ನಿಲ್ದಾಣಕ್ಕೆ ಬಂದಿಳಿದ ಅವರು, ನೇರವಾಗಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿರುವ ನಿತಿನ್ ನಬಿನ್ ನಿವಾಸಕ್ಕೆ ಭೇಟಿ ನೀಡಿ, ಚರ್ಚೆ ನಡೆಸಿದರು. ಬಳಿಕ ನಾಮಪತ್ರ ಸಲ್ಲಿಕೆಗೆ ಆಗಮಿಸಿದರು. ಈ ವೇಳೆ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಕೂಡ ಅವರೊಂದಿಗೆ ಹಾಜರಿದ್ದರು.

ಕೇಂದ್ರ ಸಚಿವ ಮತ್ತು ಜೆಡಿಯು ನಾಯಕ ರಾಮ್ ನಾಥ್ ಠಾಕೂರ್ ಬಿಜೆಪಿಯ ಶಿವೇಶ್ ಕುಮಾರ್ ರಾಷ್ಟ್ರೀಯ ಲೋಕ ಮೋರ್ಚಾ ಅಧ್ಯಕ್ಷ ಮತ್ತು ಮಾಜಿ ಕೇಂದ್ರ ಸಚಿವ ಉಪೇಂದ್ರ ಕುಶ್ವಾಹ ಸೇರಿದಂತೆ ಇತರರು ನಾಮಪತ್ರ ಸಲ್ಲಿಸಿದವರಲ್ಲಿ ಸೇರಿದ್ದಾರೆ.

ರಾಜ್ಯಸಭೆಯ ಐದು ಸ್ಥಾನಗಳಿಗೆ ಮಾರ್ಚ್ 16ರಂದು ಚುನಾವಣೆ ನಡೆಯಲಿದೆ. 243 ಸದಸ್ಯ ಬಲದ ಬಿಹಾರ ವಿಧಾನಸಭೆಯಲ್ಲಿ 202 ಶಾಸಕರನ್ನು ಹೊಂದಿರುವ ಎನ್‌ಡಿಎ, ಅವುಗಳಲ್ಲಿ ನಾಲ್ಕು ಸ್ಥಾನಗಳನ್ನು ಸುಲಭವಾಗಿ ಗೆಲ್ಲುವ ನಿರೀಕ್ಷೆಯಿದೆ.

25 ಶಾಸಕರನ್ನು ಹೊಂದಿರುವ ಹಾಗೂ ಬಿಹಾರ ವಿಧಾನಸಭೆಯಲ್ಲಿ ವಿರೋಧ ಪಕ್ಷವಾಗಿರುವ ಆರ್‌ಜೆಡಿ ಉದ್ಯಮಿ ಮತ್ತು ಹಾಲಿ ರಾಜ್ಯಸಭಾ ಸದಸ್ಯ ಅಮರೇಂದ್ರ ಧಾರಿ ಸಿಂಗ್ ಅವರನ್ನು ಕಣಕ್ಕಿಳಿಸಿದೆ. ರಾಜ್ಯಸಭೆಗೆ ಆಯ್ಕೆಯಾದವರ ಅಧಿಕಾರಾವಧಿ ಏಪ್ರಿಲ್ 9 ರಿಂದ ಪ್ರಾರಂಭವಾಗಲಿದೆ.

ನಿತೀಶ್ ಅವರು ಸದ್ಯಕ್ಕೆ ಮುಖ್ಯಮಂತ್ರಿಯಾಗಿ ಮುಂದುವರಿಯಲಿದ್ದಾರೆ ಎಂದು ಎನ್‌ಡಿಎ ಮೂಲಗಳು ತಿಳಿಸಿವೆ. ಅವರ ಮಗ ನಿಶಾಂತ್ ಕುಮಾರ್ ಜೆಡಿಯು ಸೇರಲಿದ್ದು, ನಿತೀಶ್ ಕೇಂದ್ರಕ್ಕೆ ತೆರಳಿದ ನಂತರ ಉಪಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸುವ ನಿರೀಕ್ಷೆ ಇದೆ ಎಂದು ವರದಿಗಳು ತಿಳಿಸಿವೆ.



ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ನಾಳೆ ಸಿಎಂ ಸಿದ್ದರಾಮಯ್ಯನವರ ಬಜೆಟ್ ಭಾಷಣ ನೇರಪ್ರಸಾರ



ಬೆಂಗಳೂರು,ಮಾ.05-

ಸಿಎಂ ಸಿದ್ದರಾಮಯ್ಯ ಅವರು ಮಾರ್ಚ್ 6ರ ಶುಕ್ರವಾರ 2026-27ನೇ ಸಾಲಿನ ಆಯವ್ಯಯ ಮಂಡಿಸಲಿದ್ದು, ಇದರ ನೇರ ಪ್ರಸಾರವನ್ನು ರಾಜ್ಯದ ಆಯ್ದ 230 ಬಸ್ ನಿಲ್ದಾಣಗಳ ಟಿವಿಗಳಲ್ಲಿ ಪ್ರದರ್ಶಿಸಲಾಗುತ್ತದೆ.

ವೃತ್ತಿ ಸೊಲ್ಯೂಷನ್ಸ್ ಲಿಮಿಟೆಡ್ ಸಂಸ್ಥೆಯು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಇರುವ ತನ್ನ ಡಿಜಿಟಲ್ ಡಿಸ್ಪ್ಲೇ ಪರದೆಗಳ ಮೂಲಕ ನೇರ ಪ್ರಸಾರ ಮಾಡಲು ಮುಂದಾಗಿದೆ.

ವಿಧಾನಸೌಧದಲ್ಲಿ ನಡೆಯುವ ಬಜೆಟ್ ಮಂಡನೆ ಹಾಗೂ ಬಳಿಕ ನಡೆಯಲಿರುವ ಮುಖ್ಯಮಂತ್ರಿಗಳ ಪತ್ರಿಕಾಗೋಷ್ಠಿಯ ನೇರ ಪ್ರಸಾರವನ್ನು ಬಸ್ ನಿಲ್ದಾಣಗಳಲ್ಲಿ ಜನರು ವೀಕ್ಷಿಸಬಹುದು. ಈ ಮೂಲಕ ಬಜೆಟ್ ಕುರಿತು ಜನರಿಗೆ ನೇರವಾಗಿ ಮಾಹಿತಿ ನೀಡುವ ಅವಕಾಶ ಕಲ್ಪಿಸಲಾಗುತ್ತಿದೆ.

2025-26ನೇ ಸಾಲಿನಲ್ಲಿ ಸಿಎಂ ಸಿದ್ದರಾಮಯ್ಯ 4.09 ಲಕ್ಷ ಕೋಟಿ ರೂ ಗಾತ್ರದ ಬಜೆಟ್ ಮಂಡಿಸಿದ್ದರು. ಸುಮಾರು 19,,262 ಕೋಟಿ ರೂ ಅಂದಾಜು ಆದಾಯ ಕೊರತೆಯ ಬಜೆಟ್ ಮಂಡನೆ ಮಾಡಿದ್ದರು. ಸುಮಾರು 1,16,000 ಕೋಟಿ ರೂ. ಸಾಲದ ಮೊರೆ ಹೋಗಿದ್ದರು. ಈ ಬಾರಿ ಇತಿಮಿತಿಯಿಳಗೆ ಬಜೆಟ್ ಮಂಡಿಸುವ ಸಾಧ್ಯತೆ ಇದೆ. ವಾಸ್ತವದ ಲೆಕ್ಕಾಚಾರದೊಂದಿಗೆ ಅಭಿವೃದ್ಧಿಗೂ ಪೂರಕವಾಗಿ ಬಜೆಟ್ ಮಂಡಿಸುವ ನಿರೀಕ್ಷೆ ಇದೆ.

ಕಳೆದ ಬಜೆಟ್‌ನಲ್ಲಿ ನಿಗದಿಪಡಿಸಿದ ರಾಜಸ್ವ ಸಂಗ್ರಹ ಸಾಧ್ಯವಾಗದ ಕಾರಣ ಕೊನೆಗೆ ಬಜೆಟ್ ಗುರಿ ಕಡಿಮೆ ಮಾಡಬೇಕಾಯಿತು. ಹೀಗಾಗಿ ಈ ಬಾರಿ ವಾಸ್ತವ ಲೆಕ್ಕಾಚಾರದೊಂದಿಗೆ ಬಜೆಟ್ ಮಂಡನೆಗೆ ಸಿಎಂ ಸಿದ್ದರಾಮಯ್ಯ ಮುಂದಾಗಿದ್ದಾರೆ ಎನ್ನಲಾಗಿದೆ. ವಾಸ್ತವ ಲೆಕ್ಕಾಚಾರದ ಆದಾಯ ಸಂಗ್ರಹದ ಗುರಿಯೊಂದಿಗೆ ಸಿಎಂ ಹಿತಮಿತದ ಬಜೆಟ್ ಮಂಡಿಸುವ ಸಾಧ್ಯತೆ ಇದೆ. ಸಮತೋಲಿತ ಬಜೆಟ್‌ಗೆ ಹೆಚ್ಚಿನ ಒತ್ತು ನೀಡುವ ಸಾಧ್ಯತೆ ಇದೆ. ದೊಡ್ಡ ಗಾತ್ರದ ಬಜೆಟ್ ಮಂಡನೆ ಬದಲು ಇತಿಮಿತಿಯಲ್ಲಿ ಅಭಿವೃದ್ಧಿ ಪೂರಕವಾದ, ಸಮತೋಲಿತ ಆಯವ್ಯಯ ಮಂಡಿಸಲು ಯತ್ನಿಸಲಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಇಂಡೋಗ್ಲೋಬ್ ನಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಸ್ಪರ್ಧಾ ಪರೀಕ್ಷೆ : ಟಿ.ಎಂ.ಗೌಡ



ಮಾನ್ವಿ, ಮಾ.5-

ಇಂಡೋಗ್ಲೋಬ್ ಪಿಯು ಕಾಲೇಜ್ ವತಿಯಿಂದ ಇಂಡೋಗ್ಲೋಬ್ ಟ್ಯಾಲೆಂಟ್ ಅವಾರ್ಡ್ 2026 ಸಾಲಿನಲ್ಲಿ 10ನೇ ತರಗತಿ ವಿದ್ಯಾರ್ಥಿಗಳು ಪರೀಕ್ಷೆ ಬರೆದು ಬಹುಮಾನ ಗೆಲ್ಲಿ ಎಂದು ಇಂಡೋಗ್ಲೋಬ್ ಪಿಯು ಕಾಲೇಜ್ ಅಧ್ಯಕ್ಷ ಟಿ.ಎಂ ಗೌಡ ಬಾಗಲಕೋಟೆ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಈ ಪರೀಕ್ಷೆಯು ಪ್ರಸಕ್ತ ಸಾಲಿನ ಕನ್ನಡ ಮತ್ತು ಆಂಗ್ಲ ಮಾಧ್ಯಮದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಮಾತ್ರ 60 ಅಂಕಗಳು 60 ನಿಮಿಷಗಳ ಪರೀಕ್ಷೆ, 50 ಅಂಕಗಳಿಗಿಂತ ಅಧಿಕ ಅಂಕ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ಅನ್ವಯವಾಗುತ್ತದೆ. ಪರೀಕ್ಷಾರ್ಥಿಗಳು ಶಾಲೆಯ ಐಡಿ ಕಾರ್ಡ್ ಅಥವಾ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಹಾಲ್ ಟಿಕೇಟ್ ತರಬೇಕು, ಪ್ರಶ್ನೆ ಪತ್ರಿಕೆಯಲ್ಲಿ 10ನೇ ತರಗತಿಗೆ ಸಂಬಂಧಪಟ್ಟ ವಸ್ತುವಿನ ಬಹು ಆಯ್ಕೆ ಪ್ರಶ್ನೆಗಳಿದ್ದು ಇಂಗ್ಲೀಷ್

3 ನೇ ಪುಟಕ್ಕೆ



ತುಂಗಭದ್ರಾ ನದಿಯಲ್ಲಿ ಇಬ್ಬರು ಯುವಕರು ಮುಳುಗಿ ಮೃತ್ಯು

ಗಂಗಾವತಿ,ಮಾ.05-

ಹೋಳಿ ಹಬ್ಬದ ಹಿನ್ನೆಲೆ ನದಿ ಸ್ನಾನಕ್ಕೆ ತೆರಳಿದ್ದ ಮೂವರು ಯುವಕರು ಆಕಸ್ಮಿಕವಾಗಿ ತುಂಗಭದ್ರಾ ನದಿಯಲ್ಲಿ ಮುಳುಗಿದ ಘಟನೆ ಬುಧವಾರ ಸಂಜೆ ನಡೆದಿದೆ.

ಈ ಪೈಕಿ ಒಬ್ಬ ಯುವಕ ಈಜಿದಡ ಸೇರಿದರೆ, ಇನ್ನಿಬ್ಬರು ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.


ಮೃತರನ್ನು ಗಂಗಾವತಿಯ ಗಾಂಧಿನಗರ ನಿವಾಸಿಗಳಾದ ಸೂರ್ಯ (17) ಹಾಗೂ ಅಭಿಷೇಕ (17) ಎಂದು ಗುರುತಿಸಲಾಗಿದೆ.

ಹೋಳಿ ಕಾರ್ಯಕ್ರಮಗಳ ಬಳಿಕ ಸ್ನೇಹಿತರೊಂದಿಗೆ ಊಟ ಮಾಡಿಕೊಂಡು ನದಿ ಸ್ನಾನಕ್ಕೆ ತೆರಳಿದ್ದ ವೇಳೆ ಕಾಲು ಜಾರಿ ನೀರಿನಲ್ಲಿ ಬಿದ್ದಿದ್ದಾರೆ ಎಂದು ತಿಳಿದು ಬಂದಿದೆ.

3 ನೇ ಪುಟಕ್ಕೆ

ಬಿಜೆಪಿ ಜಿಲ್ಲಾ ಎಸ್.ಸಿ. ಮೋರ್ಚಾ ಪ್ರ. ಕಾ. ಜಯರಾಜ ಜಡಿಮಳೆ ಆಯ್ಕೆ

ನಿಷ್ಠಾವಂತರಿಗೆ ಪಕ್ಷ ಅಧಿಕಾರ ಸ್ಥಾನಮಾನ ನೀಡುತ್ತದೆ- ಜಯರಾಜ ಜಡಿಮಳೆ



ಸಿರವಾರ.ಮಾ.05-

ಪಕ್ಷನಿಷ್ಠರಾಗಿ ದುಡಿದರೆ, ಮುಂದೊಂದು ದಿನ ಅದಿಕಾರದ ಭಾಗ್ಯ ದೊರೆಯುತ್ತದೆ ಎಂಬುದಕ್ಕೆ ನಾನೆ ಉದಾಹರಣೆಯಾಗಿರುವೆ, ಬಿಜೆಪಿ ಪಕ್ಷದಲ್ಲಿ ನಿರಂತರ. ಸೇವೆಯನ್ನು ಗುರುತಿಸಿ ಈ ಸ್ಥಾನಮಾನ ನೀಡಿದೆ ಎಂದು ಬಿಜೆಪಿ ಜಿಲ್ಲಾ ಎಸ್ ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಆಯ್ಕೆಯಾದ ಜಯರಾಜ ಜಡಿಮಳೆ ಹೇಳಿದರು.

ರಾಯಚೂರು ಜಿಲ್ಲಾ ಬಿಜೆಪಿ ಎಸ್.ಸಿ. ಮೋರ್ಚಾ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾದ

3 ನೇ ಪುಟಕ್ಕೆ

ಕೇಜ್ರಿವಾಲ್, ಸಿಸೋಡಿಯಾ ಖುಲಾಸೆ ಆಮ್ ಆದ್ಮಿ ಪಕ್ಷದಲ್ಲಿ ಹರ್ಷ



ರಾಯಚೂರು, ಮಾ.5-

ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ದೆಹಲಿಯ ಮಾಜಿ ಮುಖ್ಯಮಂತ್ರಿ ಕೇಜ್ರಿವಾಲ್, ಟ ಹಾಗೂ ಮಾಜಿ ಉಪಮುಖ್ಯಮಂತ್ರಿ ಸಿಸೋಡಿಯಾ ಅವರನ್ನು ನ್ಯಾಯಾಲಯ ಖುಲಾಸೆಗೊಳಿಸಿ ರುವ ಹಿನ್ನೆಲೆಯಲ್ಲಿ ರಾಯಚೂರಿನಲ್ಲಿ ಆಮ್ ಆದ್ಮಿ ಪಕ್ಷದ ಕಾರ್ಯಕರ್ತರು ಹರ್ಷಾಚರಣೆ ನಡೆಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪಕ್ಷದ ಜಿಲ್ಲಾಧ್ಯಕ್ಷ ಡಿ. ವೀರೇಶ ಕುಮಾರ್, ಪ್ರಕರಣದಲ್ಲಿ ಸಮರ್ಪಕ ಸಾಕ್ಷ್ಯಾಧಾರಗಳಿಲ್ಲದೆ ಆರೋಪ ಮಾಡಲಾಗಿದೆ ಎಂಬ ನ್ಯಾಯಾಲಯದ ಅಭಿಪ್ರಾಯವು ಸತ್ಯಕ್ಕೆ ದೊರೆತ ನ್ಯಾಯವೆಂದು ಹೇಳಿದರು. ದೀರ್ಘಕಾಲದಿಂದ ರಾಜಕೀಯ ಉದ್ದೇಶದಿಂದಲೇ ಈ ಪ್ರಕರಣವನ್ನು ಮುಂದುವರಿಸಲಾಗಿದೆ ಎಂಬುದು ತೀರ್ಪಿನಿಂದ ಸ್ಪಷ್ಟವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ದೆಹಲಿಯಲ್ಲಿ ಆಮ್ ಆದ್ಮಿ ಪಕ್ಷದ ಆಡಳಿತ ಭ್ರಷ್ಟಾಚಾರರಹಿತ

3 ನೇ ಪುಟಕ್ಕೆ

ಮಾ.7 ರಂದು ರಾಯಚೂರಿನಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ಹಕ್ಕೊತ್ತಾಯ ಸಮಾವೇಶ : ರಾಜಾಸಾಬ್

ಮಾನ್ವಿ, ಮಾ.5-

ತುಂಗಭದ್ರಾ ನೀರಾವರಿ ಕಾರ್ಮಿಕರನ್ನು ಖಾಯಂ ಕೆಲಸಗಾರರೆಂದು ಪರಿಗಣಿಸಲು ಮತ್ತು ಉದ್ಯೋಗ ಭದ್ರತೆ ನೀಡಲು ಆಗ್ರಹಿಸಿ ಮಾರ್ಚ್ 7 ರಂದು ರಾಯಚೂರಿನ ಪಂ.ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ಹಕ್ಕೊತ್ತಾಯ ಸಮಾವೇಶದಲ್ಲಿ ಸಿರವಾರ ವಿಭಾಗದ ಎಲ್ಲಾ ಕಾರ್ಮಿಕರು ಭಾಗವಹಿಸಲಿದ್ದಾರೆ ಎಂದು ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ಸಿರವಾರ ವಿಭಾಗ ಸಮಿತಿ ಅಧ್ಯಕ್ಷ ರಾಜಾಸಾಬ್ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಬಿತ್ತಿಪತ್ರ ಬಿಡುಗಡೆ ಮಾಡಿ ಮಾತನಾಡುತ್ತಾ ಈ ಸಮಾವೇಶವನ್ನು ಮಾಜಿ ಕಾರ್ಮಿಕ ಸಚಿವರು ಹಾಗೂ ಹಿರಿಯ



ಕಾರ್ಮಿಕ ನಾಯಕರಾದ ಎಸ್.ಕೆ. ಕಾಂತ ಅವರು ಉದ್ಘಾಟಿಸಲಿದ್ದಾರೆ. ಎಐಸಿಸಿಟಿಯು ರಾಷ್ಟ್ರೀಯ ಉಪಾಧ್ಯಕ್ಷರು ಖ್ಯಾತ ಹೈಕೋರ್ಟ್ ವಕೀಲರಾದ ಕ್ಲಿಫ್ಟನ್ ಡಿ'ರಿಜೋರಿಯಾ ಹಾಗೂ ಎಐಸಿಸಿಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಮೈತ್ರೇಯಿ ಕೃಷ್ಣನ್ ಪ್ರಮುಖ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.


ತುಂಗಭದ್ರಾ ನೀರಾವರಿ ಯೋಜನೆ ಖಾಯಂ ಸ್ವರೂಪದ್ದಾಗಿದ್ದು ಡ್ಯಾಮ್ ಮ್ಯಾನುವೆಲ್ ಪ್ರಕಾರ ಈ ಯೋಜನೆಯಲ್ಲಿ 1818 ಖಾಯಂ ಕಾರ್ಮಿಕ ಹುದ್ದೆಗಳು ಅಸ್ತಿತ್ವದಲ್ಲಿವೆ. ಅದರನ್ವಯ ಕಾರ್ಮಿಕರಿಗೆ ವರ್ಷಪೂರ್ತಿ ನಿರಂತರ ಕೆಲಸ ನೀಡಬೇಕಾಗಿದೆ. ಹಿಂದಿನ ಅವಧಿಯಲ್ಲಿ ಕಾರ್ಮಿಕರಿಗೆ ವರ್ಷಪೂರ್ತಿ ಕೆಲಸ ನೀಡಲಾಗುತ್ತಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಕಾರ್ಮಿಕರಿಗೆ ವರ್ಷಪೂರ್ತಿ ಕೆಲಸ ನೀಡದೆ ಅನ್ಯಾಯ ಮಾಡಲಾಗುತ್ತಿದೆ.

ಈ ಹಿಂದೆ ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಕಾರ್ಮಿಕರಿಗೆ ವರ್ಷಪೂರ್ತಿ ಕೆಲಸ ನೀಡಲು ಆದೇಶ ಹೊರಡಿಸಿದ್ದರು. ಆದಾಗ್ಯೂ ತುಂಗಭದ್ರಾ ನೀರಾವರಿ ಕೇಂದ್ರ ವಲಯದ ಅಧಿಕಾರಿಗಳು ಆ ಆದೇಶವನ್ನು ಜಾರಿಗೊಳಿಸಿಲ್ಲ. ಈಗ ಸರ್ಕಾರದ ನಿರ್ದೇಶನದಂತೆ ಹಾಗೂ ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ದಿ. 19.07.2025 ರಂದು ನೀಡಿದ ಅನುಮೋದನೆ ಪ್ರಕಾರ ಕಾರ್ಮಿಕರನ್ನು ಕೆಲಸದಲ್ಲಿ ಮುಂದುವರೆಸುವಂತೆ ನಮ್ಮ ಸಂಘ ಮನವಿ ಸಲ್ಲಿಸಿದ್ದರೂ ಅದನ್ನು ಪರಿಗಣಿಸದೆ ಕಾರ್ಮಿಕರನ್ನು ಕೆಲಸದಿಂದ ತೆಗೆಯಲು

3 ನೇ ಪುಟಕ್ಕೆ

ಬಿಜೆಪಿ ಜಿಲ್ಲಾ ಎಸ್.ಸಿ. ಮೋರ್ಚಾ ಪ್ರ. ಕಾ. ಜಯರಾಜ ಜಡಿಮಳೆ ಆಯ್ಕೆ

ನಿಷ್ಠಾವಂತರಿಗೆ ಪಕ್ಷ ಅಧಿಕಾರ ಸ್ಥಾನಮಾನ ನೀಡುತ್ತದೆ- ಜಯರಾಜ ಜಡಿಮಳೆ



ಸಿರವಾರ.ಮಾ.05-

ಪಕ್ಷನಿಷ್ಠರಾಗಿ ದುಡಿದರೆ, ಮುಂದೊಂದು ದಿನ ಅದಿಕಾರದ ಭಾಗ್ಯ ದೊರೆಯುತ್ತದೆ ಎಂಬುದಕ್ಕೆ ನಾನೆ ಉದಾಹರಣೆಯಾಗಿರುವೆ, ಬಿಜೆಪಿ ಪಕ್ಷದಲ್ಲಿ ನಿರಂತರ. ಸೇವೆಯನ್ನು ಗುರುತಿಸಿ ಈ ಸ್ಥಾನಮಾನ ನೀಡಿದೆ ಎಂದು ಬಿಜೆಪಿ ಜಿಲ್ಲಾ ಎಸ್ ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಆಯ್ಕೆಯಾದ ಜಯರಾಜ ಜಡಿಮಳೆ ಹೇಳಿದರು.

ರಾಯಚೂರು ಜಿಲ್ಲಾ ಬಿಜೆಪಿ ಎಸ್.ಸಿ. ಮೋರ್ಚಾ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾದ

3 ನೇ ಪುಟಕ್ಕೆ

ಬಳ್ಳಾರಿಯಲ್ಲಿ ಬೃಹತ್ ಉದ್ಯೋಗ ಮೇಳಕ್ಕೆ ಮುಂಡರಗಿ ನಾಗರಾಜ್ ಚಾಲನೆ

ರಾಜ್ಯ ಸರ್ಕಾರ ಉದ್ಯೋಗಾಕಾಂಕ್ಷಿಗಳ ಪರವಾಗಿದೆ





ಬಳ್ಳಾರಿ,ಮಾ.04-

ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ನೇತೃತ್ವದ ರಾಜ್ಯ ಸರ್ಕಾರವು ಉದ್ಯೋಗಾಕಾಂಕ್ಷಿಗಳ ಪರವಾಗಿದೆ ಎಂದು ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾ ಯತ್, ಕೌಶಲ್ಯಾಭಿವೃದ್ಧಿ ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ - ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ, ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ ಹಾಗೂ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ಸ್ವಾಯತ್ತ) ಬಳ್ಳಾರಿ ಇವರುಗಳ ಸಂಯುಕ್ತಾಶ್ರಯದಲ್ಲಿ ಡಿಡಿಯು- ಜಿಕೆವೈ ಯೋಜನೆಯಡಿ ನಗರದ ಶ್ರೀಮತಿ ಸರಳಾದೇವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ಏರ್ಪಡಿಸಿದ್ದ ಬಳ್ಳಾರಿ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಒಳಮೀಸಲಾತಿ ಜಾರಿ ಅನುಷ್ಠಾನ ದಿಂದ ಹುದ್ದೆ ಭರ್ತಿ ಪ್ರಕ್ರಿಯೆ ತಡೆಹಿಡಿಯಲಾಗಿತ್ತು. ಈಗ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸಚಿವ ಸಂಪುಟದ ನಿರ್ಧಾರದಂತೆ ಸದ್ಯದಲ್ಲೇ 52,000 ಕ್ಕೂ ಹೆಚ್ಚು ಸರ್ಕಾರಿ ಉದ್ಯೋಗ ಗಳನ್ನು ಭರ್ತಿ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರದ ನಿರ್ದೇಶ ನದಂತೆ ಜಿಲ್ಲಾಡಳಿತ ವತಿಯಿಂದ ಬಳ್ಳಾರಿಯಲ್ಲಿ ಆಯೋಜಿಸಿರುವ ಈ ಉದ್ಯೋಗ ಮೇಳವು ನಿರುದ್ಯೋಗಿ ಯುವಕರಲ್ಲಿ ಹೊಸ ಭರವಸೆಯನ್ನು ಮೂಡಿಸಿದೆ. ಮೇಳದಲ್ಲಿ ಸುಮಾರು 60ಕ್ಕೂ ಹೆಚ್ಚು ಕಂಪನಿಗಳು ಭಾಗವಹಿ ಸಿದ್ದು, ಸುಮಾರು 6,000ಕ್ಕೂ ಅಧಿಕ ಅಭ್ಯರ್ಥಿಗಳು ನೋಂದಾಯಿಸಿ ಕೊಂಡಿದ್ದಾರೆ ಎಂದು ಅವರು ತಿಳಿಸಿ ದರು.

2017-18ರಲ್ಲಿ ಸಿದ್ದರಾಮ ಯ್ಯನವರ ನೇತೃತ್ವದ ಸರ್ಕಾರದಲ್ಲಿ ಬಳ್ಳಾರಿಯ ಜಿಂದಾಲ್ ಬಳಿ ನಡೆದ ಮೂರು ದಿನಗಳ ಮೇಳದಲ್ಲಿ 350 ಕಂಪನಿಗಳು ಭಾಗವಹಿಸಿ, 30,00 0ಕ್ಕೂ ಹೆಚ್ಚು ಜನರಿಗೆ ಉದ್ಯೋಗ ದೊರಕಿಸಿಕೊಡಲಾಗಿತ್ತು ಎಂಬುದನ್ನು ಈ ಸಂದರ್ಭದಲ್ಲಿ ಸ್ಮರಿಸಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಈಗಾಗಲೇ ಇತ್ತೀಚೆಗೆ ಕಲಬುರಗಿ ಯಲ್ಲಿ ನಡೆದ ವಿಭಾಗ ಮಟ್ಟದ ಮೇಳದಲ್ಲಿ ಸಾವಿರಾರು ಜನರಿಗೆ ಕೆಲಸ ಸಿಕ್ಕಿದೆ. ಉದ್ಯೋಗ ಸಿಗದ ಪದವೀಧರರಿಗೆ ಆಸರೆಯಾಗಲು ಸರ್ಕಾರ 'ಯುವನಿಧಿ' ಯೋಜನೆ ಯಡಿ ಆರ್ಥಿಕ ನೆರವು ನೀಡುತ್ತಿದೆ ಎಂದು ಹೇಳಿದರು.

ಬಳ್ಳಾರಿ ಜಿಲ್ಲೆಯು ಕೈಗಾರಿಕಾ ಹಬ್ ಆಗಿರುವುದರಿಂದ, ಮುಂದಿನ ದಿನಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಜಮೀರ್ ಅಹ್ಮದ್ ಖಾನ್ ಹಾಗೂ ಸ್ಥಳೀಯ ಶಾಸಕರೊ ಂದಿಗೆ ಚರ್ಚಿಸಿ, ವಿವಿಧ ದೊಡ್ಡ ಕೈಗಾರಿಕೆಗಳ ಸಹಯೋಗದೊಂದಿಗೆ ಇನ್ನೂ ಬೃಹತ್ ಮಟ್ಟದ ಉದ್ಯೋಗ ಮೇಳವನ್ನು ಆಯೋಜಿಸುವ ಕುರಿತು ಚರ್ಚಿಸಲಾಗುವುದು ಎಂದು ಅವರು ತಿಳಿಸಿದರು.

ಮಹಾನಗರ ಪಾಲಿಕೆ ಮಹಾಪೌ ರರಾದ ಪಿ.ಗಾದೆಪ್ಪ ಅವರು ಮಾತ ನಾಡಿ, ಬಳ್ಳಾರಿ ಜಿಲ್ಲೆಯು ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತಿ ಹೆಚ್ಚು ಕೈಗಾರಿಕೆ ಕಂಪನಿಗಳನ್ನು ಹೊಂದಿರುವ ಜಿಲ್ಲೆಯಾಗಿದೆ. ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಒದಗಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತದ ಈ ಮಹತ್ವದ ಕಾರ್ಯ ಶ್ಲಾಘನೀ ಯವಾಗಿದೆ ಎಂದು ಹೇಳಿದರು.

ಬಳ್ಳಾರಿ ವಲಯ ಪೊಲೀಸ್ ಉಪಮಹಾನಿರೀಕ್ಷಕ ಡಾ.ಪಿ.ಎಸ್. ಹರ್ಷ ಅವರು ಮಾತನಾಡಿ, ಯುವಪೀಳಿಗೆಗೆ ಅಗತ್ಯವಾದುದು ಉದ್ಯೋಗಾವಕಾಶ. ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿರುದ್ಯೋಗ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಉದ್ಯೋಗ ಮೇಳಗಳು ಅತಿ ಅವಶ್ಯಕವಾಗಿವೆ. ಈ ಭಾಗದ ಯುವಕರಿಗೆ ಉದ್ಯೋಗ ಸೃಷ್ಟಿಸು ವುದು ಇಂದಿನ ತುರ್ತು ಅಗತ್ಯವಾ ಗಿದೆ ಎಂದು ಹೇಳಿದರು.

ಉದ್ಯೋಗ ಮೇಳದಲ್ಲಿ ಭಾಗ ವಹಿಸಿದ ಅಭ್ಯರ್ಥಿಗಳ ಪ್ರೊಫೈಲ್ ಗಳನ್ನು ಡಿಜಿಟಲೀಕರಣಗೊಳಿಸಿ, ಪ್ರಾದೇಶಿಕ ಆಯುಕ್ತರ ವ್ಯಾಪ್ತಿಯಲ್ಲಿ ಬರುವ ವಿವಿಧ ಅವಕಾಶಗಳಿಗೆ ಕಳುಹಿಸಿಕೊಡುವ ಯೋಜನೆಯನ್ನೂ ಹಾಕಿಕೊಳ್ಳಲಾಗಿದೆ. ಈ ಮೇಳವು ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಪೂರಕವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಒಂದು ವೇಳೆ ಇಲ್ಲಿ ಉದ್ಯೋಗ ದೊರೆಯದಿದ್ದಲ್ಲಿ, ಯಾರೂ ನಿರಾಶರಾಗಬಾರದು. ಅಭ್ಯರ್ಥಿಗಳು ತಮಗೆ ಆಸಕ್ತಿ ಮತ್ತು ಅಗತ್ಯವಿರುವ ಕೌಶಲ್ಯ ತರಬೇತಿ ಹೊಂದಬೇಕು. ಭವ್ಯ ಭಾರತದ ಭವಿಷ್ಯ ನಿರ್ಮಾಣ ಮಾಡುವ ಕಾರ್ಯ ನಿಮ್ಮಿಂದಾಗ ಬೇಕು ಎಂದು ಯುವ ಸಮುದಾಯ ವನ್ನು ಎಂದು ಹಾರೈಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಬಳ್ಳಾರಿ ಜಿಲ್ಲೆಯಲ್ಲಿ ಪದವೀಧರರು, ಡಿಪ್ಲೊಮಾ ವಿದ್ಯಾರ್ಥಿಗಳು ಸೇರಿ ದಂತೆ ಸಾಕಷ್ಟು ಪ್ರತಿಭಾವಂತ ಅಭ್ಯ ರ್ಥಿಗಳಿದ್ದಾರೆ. ಆದರೆ, ಕಂಪನಿಗಳು ಮತ್ತು ಅಭ್ಯರ್ಥಿಗಳ ನಡುವೆ ನೇರ ಸಂಪರ್ಕದ ಕೊರತೆಯಿದೆ. ಇದನ್ನು ಹೋಗಲಾಡಿಸಲು ಉದ್ಯೋಗ ಮೇಳ ವೇದಿಕೆ ಸಿದ್ದಪಡಿಸಲಾಗಿದೆ. ಅಭ್ಯರ್ಥಿ ಗಳು ತಮ್ಮ ಶೈಕ್ಷಣಿಕ ದಾಖಲೆಗ ಳೊಂದಿಗೆ ಬಂದು ಕಂಪನಿಗಳ ಪ್ರತಿನಿಧಿಗಳನ್ನು ನೇರವಾಗಿ ಭೇಟಿ ಮಾಡಿ ಸಂದರ್ಶನ ಎದುರಿಸಬ ಹುದು ಎಂದು ಹೇಳಿದರು.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೇವಲ ಪುಸ್ತಕದ ಜ್ಞಾನವಿದ್ದರೆ ಸಾಲದು. ಕಂಪ್ಯೂಟರ್ ಲ್ಯಾಂಗ್ವೇಜ್ ಗಳಾದ ಪೈಥಾನ್, ಜಾವಾ, ಡೇಟಾ ಸೈನ್ಸ್ ಹಾಗೂ ಎಐ-ಎಂಎಲ್ ನಂತಹ ವಿಶೇಷ ಕೌಶಲ್ಯಗಳನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ. ಮುಖ್ಯವಾಗಿ ಅಭ್ಯರ್ಥಿಗಳಲ್ಲಿ ಕೌಶಲ್ಯದ ಜೊತೆಗೆ ಆತ್ಮವಿಶ್ವಾಸ ಇರುವುದು ಅತಿ ಮುಖ್ಯ. ಆಗ ಮಾತ್ರ ಸಂದರ್ಶನಗಳಲ್ಲಿ ಯಶಸ್ವಿ ಯಾಗಲು ಸಾಧ್ಯ ಎಂದು ಅಭಿಪ್ರಾ ಯಪಟ್ಟರು.

ಕೇವಲ ಪದವಿ ಪ್ರಮಾಣ ಪತ್ರಗಳಿಂದ ಕೆಲಸ ಸಿಗುವುದು ಕಷ್ಟ. ಕೈಗಾರಿಕೆಗಳ ಬೇಡಿಕೆಗೆ ತಕ್ಕಂತೆ ನಿಮ್ಮ ಕೌಶಲ್ಯಗಳನ್ನು ನಿರಂತರವಾಗಿ ಅಪ್‌ಡೇಟ್ ಮಾಡಿಕೊಳ್ಳುತ್ತಿರಬೇಕು. ಇಂಟರ್ನ್‌ಶಿಪ್ ಮತ್ತು ತರಬೇತಿ ಗಳಲ್ಲಿ ಭಾಗವಹಿಸುವ ಮೂಲಕ ಅನುಭವ ಪಡೆಯಬೇಕು ಎಂದು ಕಿವಿಮಾತು ಹೇಳಿದರು. ಇದೇ ವೇಳೆ ವಿಟಿಎಸ್ ಹೆಚ್ ಆರ್ ಸರ್ವೀಸಸ್ ನಲ್ಲಿ ಉದ್ಯೋಗ ಪಡೆದ ಆಕಾಂಕ್ಷಿ ಬಳ್ಳಾರಿಯ ಜಿ. ಎಸ್. ಹರ್ಷ ಅವರಿಗೆ ಸ್ಥಳದಲ್ಲಿಯೇ ಗಣ್ಯರು ನೇಮಕಾತಿ ಆದೇಶ ಪತ್ರ ವಿತರಿಸಿದರು.

ಮೇಳದಲ್ಲಿ ಉದ್ಯೋ ಗಾಕಾ ಂಕ್ಷಿಗಳಿಗೆ ನೋಂದಾಯಿಸಿಕೊಳ್ಳಲು ಕ್ಯೂಆರ್ ಕೋಡ್ ವ್ಯವಸ್ಥೆ ಮಾಡ ಲಾಗಿತ್ತು. ಕಾಲೇಜಿನ ವಿವಿಧ ಕೊಠಡಿ ಗಳಲ್ಲಿ ವಿವಿಧ ಕಂಪನಿಗಳ ಉದ್ಯೋ ಗದಾತರು ಅಭ್ಯರ್ಥಿಗಳನ್ನು ಸಂದರ್ಶಿಸಿದರು. ಕಾಲೇಜಿನ ಮುಂ ಭಾ ಗದಲ್ಲಿ ಮಾರಾಟಕ್ಕೆ ಸ್ವ-ಸಹಾಯ ಗುಂಪುಗಳ ಮಹಿಳೆಯರಿಂದ ತಯಾರಿಸಿದ ವಿವಿಧ ಉತ್ಪನ್ನಗಳ 5 ಮಳಿಗೆಗಳನ್ನು ಗಣ್ಯರು ಉದ್ಘಾಟಿ ಸಿದರು. ಈ ವೇಳೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿ ಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪನ್ನೇಕರ್, ಬಳ್ಳಾರಿ ವಲಯ ಉಪಅರಣ್ಯ ಸಂರಕ್ಷಣಾಧಿ ಕಾರಿ ಡಾ.ಕೆ.ಎನ್ ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ, ಜಿಪಂ ಉಪಕಾರ್ಯದರ್ಶಿ ಶಶಿಕಾ ಂತ್ ಶಿವಪುರೆ, ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ಸ್ವಾಯ ತ್ತ) ಪ್ರಾಂಶುಪಾಲ ಡಾ.ಪ್ರಹ್ಲಾದ್ ಜೋಶಿ, ಬಳ್ಳಾರಿ ಚೇಂಬರ್ ಆಫ್ ಕಾಮರ್ಸ್ ನ ಅಧ್ಯಕ್ಷ ಅವ್ವಾರು ಮಂಜುನಾಥ, ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪಿ.ಎಸ್. ಹಟ್ಟಪ್ಪ ಸೇರಿದಂತೆ ವಿವಿಧ ಇಲಾ ಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿ, ಉದ್ಯೋ ಗದಾ ತರು, ಉದ್ಯೋಗಾಂಕ್ಷಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ವಿಶ್ವಶ್ರವಣ ದಿನದ ಅಂಗವಾಗಿ ಜಾಗೃತಿ ಕಾರ್ಯಕ್ರಮ




ಕೊಪ್ಪಳ ಮಾ.04-

ಜಿಲ್ಲಾಡಳಿತ, ಜಿಲ್ಲಾ ಪಂಚಾ ಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿಗಳ ಕಛೇರಿ, ಜಿಲ್ಲಾ ಆಸ್ಪತ್ರೆ ಹಾಗೂ ಸರ್ವೋದಯ ಗ್ರಾಮೀಣ ಕೈಗಾರಿಕಾ ತರಬೇತಿ ಸಂಸ್ಥೆ, ಕೊಪ್ಪಳ ಇವರ ಸಂಯುಕ್ತಾ ಶ್ರಯದಲ್ಲಿ ಕಾಲೇಜಿನ ಸಭಾಭವನ ದಲ್ಲಿ ಮಂಗಳವಾರಂದು ವಿಶ್ವಶ್ರವಣ ದಿನ ಜಾಗೃತಿ ಕಾರ್ಯಕ್ರಮ ಹಾಗೂ ಕಿವಿ ತಪಾಸಣಾ ಶಿಬಿರ ಹಮ್ಮಿ ಕೊಳ್ಳಲಾಗಿತ್ತು.

ಜಿಲ್ಲಾ ಅಸಾಂಕ್ರಾಮಿಕ ರೋಗ ಗಳ ನಿಯಂತ್ರಣಾಧಿಕಾರಿ ಡಾ. ಪ್ರಕಾಶ ಹೆಚ್. ಮಾತನಾಡಿ, ಪ್ರತಿ ವರ್ಷ ಮಾರ್ಚ್ 3 ರಂದು ವಿಶ್ವ ಶ್ರವಣ ದಿನ ಕಾರ್ಯಕ್ರಮ ಆಚರಿಸ ಲಾಗುತ್ತದೆ.

ಈ ಕಾರ್ಯಕ್ರಮದ ಉದ್ದೇಶ ಶ್ರವಣದೋಷ ಮತ್ತು ಕಿವುಡುತನ ತಡೆಗಟ್ಟುವಿಕೆ ಮತ್ತು ನಿಯಂತ್ರಣದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ. ಸಮುದಾಯಗಳಿಂದ ತರಗತಿಗಳಿಗೆ: ಎಲ್ಲಾ ಮಕ್ಕಳಿಗೆ ಶ್ರವಣ ಆರೈಕೆ, ಯಾವುದೇ ಮಗು ಶ್ರವಣ ಅಥವಾ ಶ್ರವಣ ಸಮಸ್ಯೆಗಳಿಂದ ಭವಿಷ್ಯದಲ್ಲಿ ಹಿಂದೆ ಉಳಿಯದಂತೆ ಈಗಲೇ ನಿಗಾವಹಿಸಿ ಎಂಬ ಘೋಷವಾಕ್ಯದೊ ಂದಿಗೆ ಈ ವರ್ಷ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಆಚರಿಸಲಾಗುತ್ತದೆ. ಕಿವಿಯು ಪ್ರತಿಯೊಬ್ಬ ಮನುಷ್ಯನ ಪಂಚೇಂದ್ರಿಯಗಳಲ್ಲಿ ಪ್ರಮುಖ ಅಂಗವಾಗಿದ್ದು, ಅದನ್ನು ಪ್ರತಿಯೊಬ್ಬರೂ ತಮ್ಮ ಜೀವನದುದ್ದಕ್ಕೂ ರಕ್ಷಣೆ ಮಾಡಿಕೊಳ್ಳಬೇಕು. ಕಿವಿಯಲ್ಲಿ ಕಡ್ಡಿ ಹಾಕಬಾರದು, ಎಣ್ಣೆ ಹಾಕಬಾರದು, ನಕಲಿ ವೈದ್ಯರ ಕಡೆಯಿಂದ ಕಿವಿಯಲ್ಲಿ ಗುಗ್ಗೆ ತೆಗೆಸಿಕೊಳ್ಳಬಾರದು. ವೈದ್ಯರ ಸಲಹೆ ಇಲ್ಲದೆ ಕಿವಿಯಲ್ಲಿ ಏನೂ ಹಾಕಬಾರದು, ಕಲುಷಿತ ನೀರಿನಲ್ಲಿ ಈಜಬಾರದು ಎಂದು ತಿಳಿಸಿದರು. ಕಿವಿನೋವು, ಸೋರುವಿಕೆ ಕಂಡು ಬಂದರೆ ತಮ್ಮ ಸಮೀಪದ ತಾಲೂಕಾ/ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ಕಿವಿ, ಮೂಗು, ಗಂಟಲು ತಜ್ಞರನ್ನು ಸಂಪರ್ಕಿಸಬೇಕು ಹಾಗೂ 2 ವರ್ಷದೊಳಗಿನ ಮಕ್ಕಳಿಗೆ ಉಚಿತ ಶ್ರವಣ ಶಸ್ತ್ರಚಿಕಿತ್ಸೆ ಯನ್ನು ಮಾಡಲಾಗುವುದು ಎಂದು ತಿಳಿಸಿದರು. ಎಲ್ಲರೂ ತಮ್ಮ ತಮ್ಮ ಕಿವಿಯ ರಕ್ಷಣೆಯ ಬಗ್ಗೆ ಜಾಗೃತರಾಗಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಿವಿ, ಮೂಗು ಹಾಗೂ ಗಂಟಲು ತಜ್ಞರಾದ ಡಾ. ಅವಿನಾಶ ಮಾತನಾಡಿ, ರಾಷ್ಟ್ರೀಯ ಶ್ರವಣದೋಷ ನಿಯಂತ್ರಣ ಮತ್ತು ನಿವಾರಣಾ ಕಾರ್ಯಕ್ರಮ, ನವಜಾತು ಶಿಶುವಿನ ಕಿವಿಯ ಆರೈಕೆ ಮತ್ತು ಕಾರ್ಯಕ್ರಮದಡಿಯಲ್ಲಿ ಸಿಗುವ ಸೇವಾ ಸೌಲಭ್ಯಗಳ ಮತ್ತು ಚಿಕಿತ್ಸೆ ಕುರಿತು ವಿಶೇಷ ಉಪನ್ಯಾಸ ನೀಡಿದರು.



ಕೋವಿಡ್‌ನಿಂದಾಗಿ ನಿಧನರಾಗಿದ್ದ ಗ್ರಾ.ಪಂ. ಸಿಬ್ಬಂದಿ ಕುಟುಂಬ ವರ್ಗದವರಿಗೆ 30 ಲಕ್ಷ ಪರಿಹಾರದ ಚೆಕ್ ವಿತರಣೆ

ಕಲಬುರಗಿ,ಮಾ.04-

ಕೋವಿಡ್-19 ಸೋಂಕು ರೋಗ ನಿಯಂತ್ರಣ ಕಾರ್ಯಕ್ರಮ ದಡಿಯಲ್ಲಿ ಗ್ರಾಮ ಪಂಚಾಯತಿ ಯಿಂದ ನಿಯೋಜಿಸಿದ ಸಿಬ್ಬಂದಿ ಯಾಗಿ ಕೆಲಸ ನಿರ್ವಹಿಸುತ್ತಿರುವ ಸಂದರ್ಭದಲ್ಲಿ ಕೋವಿಡ್ 19 ಸಾಂಕ್ರಾಮಿಕ ರೋಗ ತಗುಲಿ ನಿಧನ ರಾಗಿದ್ದ ಸರಡಗಿ (ಬಿ) ಗ್ರಾಮ ಪಂಚಾಯತಿಯ ಪಂಪ್ ಆಪರೇ ಟರ್ ಈರಣ್ಣ ತಂದೆ ಶರಣಪ್ಪ ದಂಡೋತಿ ಅವರ ಕುಟುಂಬದವರಿಗೆ ರೂ 30 ಲಕ್ಷ ಮೊತ್ತದ ಪರಿಹಾರದ ಚೆಕ್‌ನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಕಲಬುರಗಿಯಲ್ಲಿ ವಿತರಿಸಿದರು.

ಕೋವಿಡ್-19 ಸಾಂಕ್ರಾಮಿಕ ರೋಗ ತಗುಲಿದ್ದ ಈರಣ್ಣನನ್ನು 10.05.2021 ರಂದು ಕಲಬುರಗಿ ಜಿಮ್ಸ್ ಆಸ್ಪತ್ರೆಗೆ ಸೇರಿಸಲಾಗಿತ್ತು. ಆದರೂ, ಚಿಕಿತ್ಸೆ ಫಲಕಾರಿಯಾಗದೇ ಮರಣ ಹೊಂದಿದ್ದು,

ಇದರ ಬಗ್ಗೆ ಜಿಲ್ಲಾ ವೈದ್ಯಕೀಯ ಮಂಡಳಿ ಜಿಲ್ಲಾ ಆಸ್ಪತ್ರೆ ಕಲಬುರಗಿ ರವರು ಕೋವಿಡ್ -19 ರಿಂದ ಮರಣಹೊಂದಿದ ಬಗ್ಗೆ ಧೃಢೀಕರಣ ನೀಡಿರುವ ಪ್ರಯುಕ್ತ, ಕಲಬುರಗಿ ಜಿಲ್ಲಾ ಪಂಚಾಯತ ಆಶ್ವಾಸನೆ ನಿಧಿಯಿಂದ ರೂ.30 ಲಕ್ಷಗಳ ಪರಿಹಾರದ ಮೊತ್ತದ ಚೆಕ್‌ನ್ನು ವಿತರಿಸಿದ ಸಚಿವರ ಕಷ್ಟಕಾಲದಲ್ಲಿ ಕುಟುಂಬದ ನೆರವಿಗೆ ಧಾವಿಸಿದ್ದಾರೆ.

ಮೃತರ ಧರ್ಮಪತ್ನಿಯಾದ ಶ್ರೀಮತಿ ಶಾಂತಾಬಾಯಿ ಗಂಡ ದಿ.ಈರಣ್ಣ ದಂಡೋತಿ ಸಚಿವರಿಂದ ಚೆಕ್ ಪಡೆದುಕೊಂಡರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಹರವಾಳ, ವ್ಯವಸ್ಥಾಪಕ ನಿರ್ದೇಶಕ ಕೃಷ್ಣ ಬಾಜಪೇಯಿ, ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಜಿ.ಪಂ. ಸಿ.ಇ.ಓ. ಭಂವರಸಿಂಗ್ ಮೀನಾ ಹಾಗೂ ಮುಖ್ಯ ಲೆಕ್ಕಾಧಿಕಾರಿ ವಿಕಾಸ ಸಜ್ಜನ್ ಹಾಗೂ ಇತರರು ಉಪಸ್ಥಿತರಿದ್ದರು.

8 ರಂದು ಯಮನೂರಪ್ಪ ಉರುಸು

ಸಿಂಧನೂರು,ಮಾ.04-

ನಗರದ ಹಜರತ್ ಸೈಯ್ಯದ್ ತಾಜುದ್ದೀನ್ ಬಾಬಾ ಉರ್ಫ್ ರಾಜಾ ಬಾಗಸವಾರ ಅವರ 78ನೇ ವರ್ಷದ ಯಮನೂರಪ್ಪ ಉರುಸು ಮಾ.8 ರಂದು ನಡೆಯಲಿದೆ ಎಂದು ಯಮನೂರಪ್ಪ ದರ್ಗಾ ಕಮಿಟಿ ಅಧ್ಯಕ್ಷ ಹಾಗೂ ನಗರಸಭೆ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ತಿಳಿಸಿದ್ದಾರೆ.

ಮಂಗಳವಾರ ಹೇಳಿಕೆ ನೀಡಿರುವ ಅವರು, ಮಾಜಿ ಶಾಸಕ ಬಸವಂತರಾಯ ಪಾಟೀಲ್ ಅವರ ಮನೆಯಿಂದ ಗಂಧವು ಮಾ.7 ರಂದು ಮಧ್ಯಾಹ್ನ 1.30 ಗಂಟೆಗೆ ಪಟೇಲ್‌ವಾಡಿ, ದ್ಯಾವಮ್ಮ ಗುಡಿ, ಹಳೆಬಜಾರ್ ರಸ್ತೆ ಮೂಲಕ ಭಾಜಾ-ಭಜಂತ್ರಿಯೊಂದಿಗೆ ಅದ್ದೂರಿ ಮೆರವಣಿಗೆ ಮೂಲಕ ಯಮನೂರಪ್ಪ ದರ್ಗಾ ಸೇರಲಿದೆ. ಮಾ.8 ರಂದು ಉರುಸು, 9 ರಂದು ಬೆಳಿಗ್ಗೆ 9.30 ಗಂಟೆಗೆ ಜಿಯಾರತ್ ನಡೆಯಲಿದೆ ಎಂದು ವಿವರಿಸಿದ್ದಾರೆ.

ಸಂಗೀತ ಜೀವನದ ಅವಿಭಾಜ್ಯ ಅಂಗ : ರಂಭಾಪುರಿ ಶ್ರೀ



ಶ್ರೀ ರಂಭಾಪುರಿ ಪೀಠ,ಮಾ.04-


ನೊಂದ ಮನಕ್ಕೆ ಶಾಂತಿ ನೆಮ್ಮದಿ ನೀಡುವ ಶಕ್ತಿ ಸಂಗೀತಕ್ಕಿದೆ. ಸಂಗೀತ ಜೀವನದ ಒಂದು ಅವಿಭಾಜ್ಯ ಅಂಗವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ಸಂಜೆ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಸಂಗೀತ ಸೌರಭ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹಿಂದೂಸ್ಥಾನಿ ಸಂಗೀತವೇ ಇರಬಹುದು ಕರ್ನಾಟಕ ಶಾಸ್ತ್ರೀಯ ಸಂಗೀತವೇ ಇರಬಹುದು ಕಿವಿಗೆ ಇಂಪನ್ನು ಮನಸ್ಸಿಗೆ ಮುದವನ್ನು ನೀಡುವ ಶಕ್ತಿ ಹೊಂದಿವೆ. ಸಂಗೀತವನ್ನು ಕೇಳಿದ ಸಸ್ಯಗಳು ಸೊಂಪಾಗಿ ಬೆಳೆಯುತ್ತವೆ ಎಂದು ವಿಜ್ಞಾನಿಗಳು ಪ್ರಯೋಗಗಳ ಮೂಲಕ ಕಂಡುಕೊಂಡಿದ್ದಾರೆ. ಭಕ್ತಿ ಗೀತೆಗಳನ್ನು ಕೇಳಿದಾಗ ಅವ್ಯಕ್ತ ಭಕ್ತಿಯ ಭಾವನೆ ಉಂಟಾಗುವುದು ನಮ್ಮೆಲ್ಲರ ಗಮನಕ್ಕೆ ಬಂದ ವಿಷಯವಾಗಿದೆ ಎಂದರು. ಗದಗಿನ ಖ್ಯಾತ ಗಾಯಕ ಪಂ. ಡಾ.ರಾಜಗುರು ಗುರುಸ್ವಾಮಿ ಕಲಕೇರಿ ಮತ್ತು ಸಂಗಡಿಗರು ಒಂದು ಗಂಟೆಗಳ ಕಾಲ ತಮ್ಮ ಸುಶ್ರಾವ್ಯ ಸಂಗೀತದ ಮೂಲಕ ಜನಮನವನ್ನು ಸೂರೆಗೊಂಡರು.

ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಸಮಾರಂಭವನ್ನು ಉದ್ಘಾಟಿಸಿ ದರು. ಮಾಜಿ ಜಿಲ್ಲಾ ಪಂಚಾಯತ ಉಪಾಧ್ಯಕ್ಷ ಎಂ. ಎಸ್. ಚನ್ನಕೇಶವ, ಕಾಂಗ್ರೆಸ್ ಧುರೀಣರಾದ ಶ್ರೀಮತಿ ಬಿ.ಸಿ. ಗೀತಾ ಯಡ್ರಾಮಿಯ, ಚಂದ್ರಶೇಖರ ಪುರಾಣಿಕ ಮುಖ್ಯ ಅತಿಥಿಗಳಾಗಿದ್ದರು. ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಸಿಂದಗಿ, ಎಡೆಯೂರು, ಆವರಗೊಳ್ಳ, ರಾಯಚೂರು ಕಿಲ್ಲೆ ಬೃಹನ್ಮಠ, ಹೊನ್ನಕಿರಣಗಿ, ಶ್ರೀನಿವಾಸ ಸರಡಗಿ, ಸ್ಟೇಶನ್ ಬಬಲಾದ, ಹರಪನಹಳ್ಳಿ, ಮಳಲಿ, ಶಿವಗಂಗಾ, ತಾವರೆಕೆರೆ, ಬೀರೂರು, ಬಿಳಕಿ, ತಡವಲಗಾ, ಕೆಂಭಾವಿ, ಉದ್ಗಿರಿ, ನಂಜನಗೂಡು, ಮಾನಿಹಳ್ಳಿ, ಅಚಲೇರಿ, ಹಣ್ಣೆಮಠ, ಕಲ್ಬಾಳು, ನಾಗಲಾಪುರ, ರಾಜಾಪುರ, ಚನ್ನ ಗಿರಿ, ಹಾರನಹಳ್ಳಿ, ಹುಡುಗಿ ಮಠಗಳ ಮಠಾಧೀಶರು ಉಪಸ್ಥಿತರಿದ್ದರು. ಬಾಳೆಹೊನ್ನೂರು ಆರ್.ಡಿ. ಮಹೇಂದ್ರ ಸ್ವಾಗತಿಸಿದರು. ಹಂಪಸಾಗರ ನವಲಿ ಹಿರೇಮಠದ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

ಸರಳವಾಗಿ ಶ್ರೀ ಯೋಗಿನಾರೇಯಣ ಯತೀಂದ್ರ, ಕೈವಾರ ತಾತಯ್ಯ ರವರ ಜಯಂತಿ ಆಚರಣೆ



ಕಲಬುರಗಿ: ಮಾ,4-

ಶ್ರೀ ಯೋಗಿನಾರೇಯಣ ಯತೀಂದ್ರ, (ಕೈವಾರ ತಾತಯ್ಯ) ಅವರ ಜಯಂತಿ ಹಿನ್ನೆಲೆ ಕಲಬುರಗಿ ಜಿಲ್ಲಾಡಳಿತ,

ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವುಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಕಲಬುರಗಿ ನಗರದ ಡಾ. ಎಸ್.ಎಂ.ಪಂಡಿತ ರಂಗಮಂದಿ ರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ಜಗದೀಶ್ವರಿ.ಅ.ನಾಸಿ ಅವರು ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡಿ ಸರಳವಾಗಿ ಆಚರಣೆ ಮಾಡಿದರು. ಕಾರ್ಯಕ್ರಮದಲ್ಲಿ ಡಾ. ಎಸ್.ಎಂ.ಪಂಡಿತ ರಂಗ ಮಂದಿರದ ಸಿಬ್ಬಂದಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಬಳ್ಳಾರಿ:ಯತೀಂದ್ರ ಶ್ರೀ ಕೈವಾರ ಜಯಂತ್ಯೋತ್ಸವ

ಯುವಪೀಳಿಗೆ ಶಿಕ್ಷಣದಿಂದ ಮಾತ್ರ ಮುಂಚೂಣಿಗೆ ಬರಲು ಸಾಧ್ಯ-ಪಿ.ಗಾದೆಪ್ಪ



ಬಳ್ಳಾರಿ,ಮಾ.04-

ಈಗಿನ ಯುವಪೀಳಿಗೆಯು ಗುಣಮಟ್ಟದ ಶಿಕ್ಷಣ ಪಡೆದುಕೊಳ್ಳಬೇಕು. ಶಿಕ್ಷಣ ಕ್ಷೇತ್ರದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಾಗ ಮಾತ್ರ ಮುಂಚೂಣಿಗೆ ಬರಲು ಸಾಧ್ಯ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ವಡ್ಡರಬಂಡೆಯ ಬಲಿಜ ಭವನದಲ್ಲಿ ಮಂಗಳವಾರ ಏರ್ಪಡಿಸಿದ್ದ ಯೋಗಿ ನಾರೇಯಣ ಯತೀಂದ್ರ ಶ್ರೀ ಕೈವಾ ರ ತಾತಯ್ಯ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ ದರು.

ವಿಶ್ವಮಾನವ ಸಂದೇಶ ಸಾರಿದ ನಾರೇಯಣ ಯತೀಂದ್ರ ಅವರ ಜಯಂತಿ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದ್ದು, ಮಹಾನ್ ನಾಯಕರ ಆದರ್ಶ ಗುಣಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳ ಬೇಕು. ಮುಂಬರುವ ದಿನಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಆಚರಿಸಲಾಗುವ ಜಯಂತಿ ಕಾರ್ಯಕ್ರಮಗಳಿಗಾಗಿ ಮಹಾನಗರ ಪಾಲಿಕೆ ವತಿಯಿಂದ ವಿಶೇಷ ಅನುದಾನ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಬಲಿಜ ಜನಾಂಗದವರು ಸಮಾಜದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದು, ದಾನ- ಧರ್ಮಕ್ಕೆ ಆದ್ಯತೆ ನೀಡುವವರಾಗಿ ದ್ದಾರೆ. ಇನ್ನೂ ಹೆಚ್ಚಿನ ಶಿಕ್ಷಣ ಮತ್ತು ಉದ್ಯೋಗ ಅವಕಾಶಗಳನ್ನು ಪಡೆದುಕೊಳ್ಳುವ ಮೂಲಕ ಅಭಿವೃದ್ಧಿ ಹೊಂದಬೇಕು ಎಂದು ಆಶಿಸಿದರು.

ಬಳ್ಳಾರಿಯ ನಿವೃತ್ತ ಶಿಕ್ಷಕ ಕೆ.ಬಿ.ಸಿದ್ದಲಿಂಗಪ್ಪ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಕೈವಾರದ ಯೋಗಿ ನಾರೇಯಣ ಯತೀಂದ್ರ, (ತಾತ ಯ್ಯ) ಅವರು ಚಿಕ್ಕಬಳ್ಳಾಪುರ ಜಿಲ್ಲೆಯ ಪ್ರಸಿದ್ಧ ಸಂತ, ಕವಿ ಮತ್ತು ಕಾಲಜ್ಞಾನಿ. ಇವರು ಕೈವಾರದ ಅಮರನಾರಾಯಣನ ಭಕ್ತರಾಗಿದ್ದು, ಭಕ್ತಿ ಮಾರ್ಗ, ವೇದಾಂತ ಮತ್ತು ಸಾಮಾಜಿಕ ಸಮಾನತೆಯನ್ನು ಬೋಧಿಸಿದರು. ಇವರ ಕೀರ್ತನೆಗಳು ಮತ್ತು ತತ್ವಪದಗಳು (ತಾತಯ್ಯನ ತತ್ವಗಳು) ಕನ್ನಡ ಮತ್ತು ತೆಲುಗು ಸಾಹಿತ್ಯದಲ್ಲಿ ಜನಪ್ರಿಯವಾಗಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿಯ ಅನುಕೃಪ ರೌಡರು ತಂಡದಿಂದ ಭಕ್ತಿ ಸಂಗೀತ ಪ್ರಸ್ತುತ ಪಡಿಸಿದರು. ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಮಾಜದ ಮುಖಂಡರನ್ನು ಸನ್ಮಾನಿಸಿ ಗೌರವಿಸಲಾಯಿತು.

ಅದ್ದೂರಿ ಮೆರವಣಿಗೆ: ಯೋಗಿ ನಾರೇಯಣ ಯತೀಂದ್ರ ಶ್ರೀ ಕೈವಾರ ತಾತಯ್ಯ ಜಯಂತಿ ಅಂಗವಾಗಿ ನಗರದಲ್ಲಿ ಅದ್ದೂರಿ ಮೆರವಣಿಗೆ ನಡೆಯಿತು. ವಿವಿಧ ಸಾಂಸ್ಕೃತಿಕ ಕಲಾತಂಡಗಳನ್ನೊಂಡು ಮೆರವಣಿಗೆಯು ಬಲಿಜ ಭವನದಿಂದ ಆರಂಭವಾಗಿ ರಾಘವೇಂದ್ರ ಚಿತ್ರ ಮಂದಿರ- ಇಂದಿರಾ ವೃತ್ತ- ಗಡಿಗಿ ಚೆನ್ನಪ್ಪ ವೃತ್ತ- ಮೀನಾಕ್ಷಿ ವೃತ್ತ- ಮರಳಿ ಬಲಿಜ ಭವನದ ವರೆಗೆ ಸಾಗಿ ಬಂದಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಬಲಿಜ ಸಂಘದ ಅಧ್ಯಕ್ಷ ಕೆ.ರಮೇಶ್ ಬುಜ್ಜಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್ ಸೇರಿದಂತೆ ಸಮಾಜದ ಮುಖಂಡರು, ಗಣ್ಯರು, ಸಾರ್ವಜನಿಕರು,ಇತರರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಇಂಡೋಗ್ಲೋಬ್ ನಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಸ್ಪರ್ದಾ ಪರೀಕ್ಷೆ : ಟಿ.ಎಂ.ಗೌಡ

ಗ್ರಾಮರ್, ಗಣಿತ ಹಾಗೂ ವಿಜ್ಞಾನ ವಿಷಯಗಳನ್ನು ಮಾತ್ರ ಒಳಗೊಂಡಿರುತ್ತದೆ. ಟ್ಯಾಲೆಂಟ್ ಅವಾರ್ಡ್ ಪರೀಕ್ಷೆಗೆ ಹಾಜರಾಗಿ ನಮ್ಮ ಕಾಲೇಜಿನಲ್ಲಿ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಗೆ 10ಸಾವಿರ (350 ಮಕ್ಕಳಿಗೆ ಮಾತ್ರ) ಸ್ಕಾಲರ್ ಶಿಪ್ ನೀಡಲಾಗುವುದು. ಪ್ರತಿಭಾವಂತ, ಅನಾಥ ಹಾಗೂ ಬಡ ವಿದ್ಯಾರ್ಥಿಗಳಿಗೆ ವಿಶೇಷ ವಿದ್ಯಾರ್ಥಿ ವೇತನ ನೀಡಿಲಾಗುವುದು ಎಂದ ಅವರು ಈ ಪರೀಕ್ಷೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಪ್ರಥಮ ಬಹುಮಾನ 2,15 ಲಕ್ಷ ಹಾಗೂ ದ್ವಿತೀಯ ಬಹುಮಾನ 2,15 ಲಕ್ಷ , ತೃತೀಯ, ನಾಲ್ಕು ಮತ್ತು ಐದನೇ ಬಹುಮಾನ 1 ಲಕ್ಷ 5, ಸಾವಿರ ಎಂದು ಹೇಳಿದರು.ಈ ಸಂದರ್ಭದಲ್ಲಿ ಮುಖಂಡರಾದ ಅರುಣ್ ಚಂದಾ, ರಾಘವೇಂದ್ರ ಚೌಡ್ಕಿ ಇದ್ದರು.

ತುಂಗಭದ್ರಾ ನದಿಯಲ್ಲಿ ಇಬ್ಬರು ಯುವಕರು ಮುಳುಗಿ ಮೃತ್ಯು

ಸ್ಥಳೀಯರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ತಕ್ಷಣ ಶೋಧ ಕಾರ್ಯಾಚರಣೆ ನಡೆಸಿ ಮೃತದೇಹಗಳನ್ನು ಹೊರತೆಗೆದಿದ್ದಾರೆ. ಪ್ರಕರಣ ಸಂಬಂಧ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ತನಿಖೆ ಮುಂದುವರಿದಿದೆ. ಹಬ್ಬದ ಸಂಭ್ರಮದಲ್ಲಿ ನದಿ-ಕೊಳಗಳಲ್ಲಿ ಸ್ನಾನ ಮಾಡುವಾಗ ಎಚ್ಚರಿಕೆ ವಹಿಸುವಂತೆ ಸಾರ್ವಜನಿಕರಿಗೆ ಪೊಲೀಸರು ಮನವಿ ಮಾಡಿದ್ದಾರೆ.

ಬಿಜೆಪಿ ಜಿಲ್ಲಾ ಎಸ್.ಸಿ. ಮೋರ್ಚಾ ಪ್ರ. ಕಾ. ಜಯರಾಜ ಜಡಿಮಳೆ ಆಯ್ಕೆ

ನಿಷ್ಟಾವಂತರಿಗೆ ಪಕ್ಷ ಅಧಿಕಾರ ಸ್ಥಾನಮಾನ ನೀಡುತ್ತದೆ- ಜಯರಾಜ ಜಡಿಮಳೆ

ಜಯರಾಜ ಜಡಿಮಳೆ ಬಿಜೆಪಿ ಸಿರವಾರ ತಾಲೂಕು ಘಟಕದ ವತಿಯಿಂದ

ಪಟ್ಟಣದ ಪ್ರವಾಸಿ ಮಂದಿರ ಸನ್ಮಾನಿಸಿ ಅಭಿನಂದಿಸಿದರು. ಸನ್ಮಾನ ಸ್ವಿಕರಿಸಿ ಮಾತನಾಡಿದ ಅವರು ಕಳೆದ 2 ದಶಕಗಳಿಂದ ನಾನು ಬಿಜೆಪಿ ಪಕ್ಷದಲ್ಲಿ ಸೇವಕರಾಗಿ ದುಡಿದಿರುವೆ. ಹಿಂದೆ ತಾ.ಪಂ ಸದಸ್ಯರಾಗಿ ಆಯ್ಕೆಯಾಗಿ ಗೆದ್ದು ಸೇವೆ ಮಾಡಿದೆ. ನನ್ನ ಸುದೀರ್ಘ ರಾಜಕೀಯ ಬಿಜೆಪಿಯಲ್ಲಿ ದುಡಿದಿರುವೆ. ಅದರಿಂದ ಪಕ್ಷ ಜವಬ್ದಾರ ಸ್ಥಾನ ನೀಡಿದೆ. ಮುಂಬರುವ ಗ್ರಾ.ಪಂ, ತಾ.ಪಂ, ಜಿ.ಪಂ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಲು ಶ್ರಮಿಸೋಣ ಎಂದರು. ಈ ಸಂದರ್ಭದಲ್ಲಿ ಅನೀಲ್ ಕುಮಾರ ಹೊನ್ನಟಗಿ ವಕೀಲ, ಯುವಮೊ ರ್ಚಾದ ವಿನಯ್, ಮಾರೇಪ್ಪ, ಜಯಪ್ಪ, ಅರಳಪ್ಪ ಯದಲದಿನ್ನಿ, ಮುತ್ತಣ್ಣ ಚಾಗಭಾವಿ, ಜಯರಾಜ ಜಾಡಲದಿನ್ನಿ, ಅಮರೇಶ ಅತ್ತನೂ ರು, ಬಾಲಸ್ವಾಮಿ, ಬಸವ ರಾಜ ಅತ್ತನೂರು, ರಾಚಪ್ಪ ನಾಯಕ, ವೆಂಕಟೇಶ ಜಕ್ಕಲದಿನ್ನಿ, ಮೇಶಾಕ ಕೆಂಪು, ಯಲ್ಲಪ್ಪ ಬಾಗಲವಾಡ, ಹುಲ್ಲೇಶ ಲಕ್ಕಂದಿನ್ನಿ, ಅಮರೇಶ ಚೌದ್ರಿ. ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಇದ್ದರು

ಕೇಜ್ರಿವಾಲ್, ಸಿಸೋಡಿಯಾ ಖುಲಾಸೆ ಆಮ್ ಆದ್ಮಿ ಪಕ್ಷದಲ್ಲಿ ಹರ್ಷ

ಹಾಗೂ ಜನಪರವಾಗಿದೆ. ಶಿಕ್ಷಣ, ಆರೋಗ್ಯ ಮತ್ತು ಮೂಲಸೌಕರ್ಯ ಕ್ಷೇತ್ರಗಳಲ್ಲಿ ಕೈಗೊಂಡ ಸುಧಾರಣೆಗಳು ದೇಶಾದ್ಯಂತ ಮಾದರಿಯಾಗಿವೆ ಎಂದು ತಿಳಿಸಿದರು. ಈ ತೀರ್ಪು ಪಕ್ಷದ ಸಿದ್ಧಾಂತಗಳಿಗೆ ಮತ್ತಷ್ಟು ಬಲ ನೀಡಿದಂತಾಗಿದೆ ಎಂದರು.

ಪಕ್ಷದ ಸಂಘಟನೆ ವಿಸ್ತರಣೆ ಕಾರ್ಯವನ್ನು ತೀವ್ರಗೊಳಿಸಲಾಗುವುದು. ರಾಯಚೂರು ಜಿಲ್ಲೆಯ ಎಲ್ಲಾ ವಾರ್ಡ್‌ಗಳಲ್ಲಿ ಮನೆಮನೆಗೆ ಭೇಟಿ ನೀಡಿ ಸದಸ್ಯತ್ವ ಅಭಿಯಾನ ನಡೆಸಿ ಒಂದು ಲಕ್ಷಕ್ಕೂ ಅಧಿಕ ಸದಸ್ಯರನ್ನು ಸೇರ್ಪಡೆಗೊಳಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು. ಮುಂದಿನ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಕಣಕ್ಕಿಳಿಸುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅನ್ವರ್ ಭಾಷಾ, ಶರಣಪ್ಪ, ಈರೇಶ್ ಕುಮಾರ್, ಖಾದರ್ ಭಾಷಾ ಸೇರಿದಂತೆ ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು.

ಮಾ.7 ರಂದು ರಾಯಚೂರಿನಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ಹಕ್ಕೊತ್ತಾಯ ಸಮಾವೇಶ : ರಾಜಾಸಾಬ್

ಮುಂದಾಗಿದ್ದರಿಂದ ನಾವು ಕಾನೂನು ಹೋರಾಟಕ್ಕೆ ಮುಂದಾಗಿದ್ದೇವೆ ಎಂದರು.

ಉಪ ಕಾರ್ಮಿಕ ಆಯುಕ್ತರು, ಕಲಬುರ್ಗಿ ಅವರ ನೇತೃತ್ವದಲ್ಲಿ ನಡೆದ ಜಂಟಿ ಸಂಧಾನ ಸಭೆಯ ನಡುವಳಿಗಳನ್ವಯ ನಮ್ಮ ಕಾರ್ಮಿಕರನ್ನು ಕೆಲಸದಲ್ಲಿ ಮುಂದುವರೆಸಿದ ನೀರಾವರಿ ಅಧಿಕಾರಿಗಳು ವ್ಯವಸ್ಥಾಪಕ ನಿರ್ದೇಶಕರಿಗೆ ಸೂಕ್ತ ನಿರ್ದೇಶನ ಕೋರಿ ಪತ್ರ ಬರೆದಿದ್ದಾರೆ. ಆದರೂ ಸಮಸ್ಯೆ ಇನ್ನೂ ಬಗೆಹರಿಯದೆ ಉಳಿದಿದೆ. ಕಳೆದ 30 ವರ್ಷಗಳಿಂದ ತುಂಗಭದ್ರಾ ನೀರಾವರಿ ಕೇಂದ್ರ ವಲಯದ ಮುನಿರಾಬಾದ್ ವ್ಯಾಪ್ತಿಯಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ನಿರಂತರ ಕೆಲಸ ನೀಡಿ, ಖಾಯಂ ಕೆಲಸಗಾರರೆಂದು ಪರಿಗಣಿಸಿ, ಸರ್ಕಾರದ ನಿರ್ದೇಶನ, ವ್ಯವಸ್ಥಾಪಕ ನಿರ್ದೇಶಕರ ಅನುಮೋದನೆ ಹಾಗೂ ನೀರಾವರಿ ಕೇಂದ್ರ ವಲಯದ ಅಧಿಕಾರಿಗಳ ವರದಿಯನ್ವಯ ಉದ್ಯೋಗದ ಭದ್ರತೆ ಒದಗಿಸಬೇಕು. ಬದುಕುವ ವೇತನ ಸೇರಿದಂತೆ ಕಾರ್ಮಿಕರ ಎಲ್ಲಾ ಹಕ್ಕುಗಳನ್ನು ರಕ್ಷಿಸಿ, ಯೋಜನೆಯ ಜೀವಾಳುಗಳಾದ ಕಾರ್ಮಿಕರಿಗೆ ನ್ಯಾಯ ನೀಡಬೇಕು ಎಂಬುದು ಸಮಾವೇಶದ ಒತ್ತಾಯವಾಗಿದೆ. ತುಂಗಭದ್ರಾ ನೀರಾವರಿ ಕಾರ್ಮಿಕರನ್ನು ಖಾಯಂ ಕೆಲಸಗಾರರೆಂದು ಪರಿಗಣಿಸಲು ನಮ್ಮ ಬದುಕಿಗಾಗಿಯೇ ವಿನಃ ಮತ್ತೇನು ಅಲ್ಲ. ನಮ್ಮ ಸಾವಿರಾರು ದುಡಿಯುವ ಕಾರ್ಮಿಕರ ಕೈಗಳಿಗೆ ಕೆಲಸ ನೀಡುವುದರಿಂದ ಸಾವಿರಾರು ಕುಟುಂಬಗಳು ಬದುಕಿಗೆ ಆಶ್ರಯ ನೀಡಿದಂತಾಗುತ್ತದೆ. ಸಿಲ್ಟ್ ಮತ್ತು ಜಂಗಲ್ ಸೇವಾ ರಸ್ತೆ ಸುಧಾರಣೆ ಕೆಲಸಗಳನ್ನು ಸಿವಿಲ್ ಗುತ್ತೇದಾರರಿಗೆ ಟೆಂಡರ್ ನೀಡಿ ಸಾವಿರಾರು ಕಾರ್ಮಿಕರ ಕುಟುಂಬಗಳನ್ನು ಬೀದಿ ಪಾಲು ಮಾಡಬೇಡಿ ಸಿವಿಲ್ ಗುತ್ತೇದಾರರಿಗೆ ಕೊಡುವ ಕೆಲಸವನ್ನು ನಮ್ಮ ಸಾವಿರಾರು ದುಡಿಯುವ ಕಾರ್ಮಿಕರ ಕೈಗಳಿಗೆ ಕೆಲಸ ನೀಡುವುದರಿಂದ ಸಾವಿರಾರು ಕುಟುಂಬಗಳು ಬದುಕಿಗೆ ಆಶ್ರಯ ಆಗುವುದಲ್ಲದೇ ನಿಗಮಕ್ಕೆ ಹೆಚ್ಚಿನ ಅನುದಾನ ಉಳಿತಾಯ ಆಗುತ್ತದೆ ಎಂಬುದನ್ನು ತಮ್ಮ ಆಧೀನ ಅಧಿಕಾರಿಗಳು ತಿಳಿಸಿದ್ದಾರೆ. ಇದನ್ನು ತಾವುಗಳು ಗಂಭೀರವಾಗಿ ಪರಿಗಣಿಸಲು ನಮ್ಮ ಸಮಾವೇಶದ ಒತ್ತಾಯವಾಗಿದೆ ಎಂದು ರಾಜಾಸಾಬ್ ತಿಳಿಸಿದರು.

ಈ ಸಮಾವೇಶದಲ್ಲಿ ತುಂಗಭದ್ರಾ ನೀರಾವರಿ ಕಾಲುವೆ ನಂ-4 ಸಿರವಾರ ವಿಭಾಗದ ಮಾನ್ವಿ, ಸಿರಿಯವಾರ, ಹಿರೇಕೊಟ್ನೆಕಲ್, ಕವಿತಾಳ ಉಪ ವಿಭಾಗದ ಎಲ್ಲಾ ಕಾರ್ಮಿಕರು ಈ ಹಕ್ಕೊತ್ತಾಯ ಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ ಎಮನದು ರಾಜಾಸಾಬ್ ಹೇಳಿದರು.

ಈ ಸಂದರ್ಭದಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ಮಾನ್ವಿ ಉಪ ವಿಭಾಗದ ಅಧ್ಯಕ್ಷ ಬಸಲಿಂಗಪ್ಪ ಜಂಬಲದಿನ್ನಿ, ಹಿರೆಕೊಟ್ನೆಕಲ್ ಉಪ ವಿಭಾಗದ ಅಧ್ಯಕ್ಷ ವೆಂಕಟೇಶ್ ಕೋರಿ, ಸಿರವಾರ ಉಪ ವಿಭಾಗದ ಅಧ್ಯಕ್ಷ ಈಶಪ್ಪಗೌಡ, ಕವಿತಾಳ ಉಪ ವಿಭಾಗದ ಅಧ್ಯಕ್ಷ ಚಂದು ಸಾಬ್ ಸೇರಿದಂತೆ ಮಾನ್ವಿ ಕಾರ್ಮಿಕರು ಇದ್ದರು.

ಬಿಜೆಪಿ ಜಿಲ್ಲಾ ಎಸ್.ಸಿ. ಮೋರ್ಚಾ ಪ್ರ. ಕಾ. ಜಯರಾಜ ಜಡಿಮಳೆ ಆಯ್ಕೆ

ಜಯರಾಜ ಜಡಿಮಳೆ ಬಿಜೆಪಿ ಸಿರವಾರ ತಾಲೂಕು ಘಟಕದ ವತಿಯಿಂದ

ಪಟ್ಟಣದ ಪ್ರವಾಸಿ ಮಂದಿರ ಸನ್ಮಾನಿಸಿ ಅಭಿನಂದಿಸಿದರು. ಸನ್ಮಾನ ಸ್ವಿಕರಿಸಿ ಮಾತನಾಡಿದ ಅವರು ಕಳೆದ 2 ದಶಕಗಳಿಂದ ನಾನು ಬಿಜೆಪಿ ಪಕ್ಷದಲ್ಲಿ ಸೇವಕರಾಗಿ ದುಡಿದಿರುವೆ. ಹಿಂದೆ ತಾ.ಪಂ ಸದಸ್ಯರಾಗಿ ಆಯ್ಕೆಯಾಗಿ ಗೆದ್ದು ಸೇವೆ ಮಾಡಿದೆ. ನನ್ನ ಸುದೀರ್ಘ ರಾಜಕೀಯ ಬಿಜೆಪಿಯಲ್ಲಿ ದುಡಿದಿರುವೆ. ಅದರಿಂದ ಪಕ್ಷ ಜವಬ್ದಾರ ಸ್ಥಾನ ನೀಡಿದೆ. ಮುಂಬರುವ ಗ್ರಾ.ಪಂ, ತಾ.ಪಂ, ಜಿ.ಪಂ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಲು ಶ್ರಮಿಸೋಣ ಎಂದರು. ಈ ಸಂದರ್ಭದಲ್ಲಿ ಅನೀಲ್ ಕುಮಾರ ಹೊನ್ನಟಗಿ ವಕೀಲ, ಯುವಮೊ ರ್ಚಾದ ವಿನಯ್, ಮಾರೇಪ್ಪ, ಜಯಪ್ಪ, ಅರಳಪ್ಪ ಯದಲದಿನ್ನಿ, ಮುತ್ತಣ್ಣ ಚಾಗಭಾವಿ, ಜಯರಾಜ ಜಾಡಲದಿನ್ನಿ, ಅಮರೇಶ ಅತ್ತನೂ ರು, ಬಾಲಸ್ವಾಮಿ, ಬಸವ ರಾಜ ಅತ್ತನೂರು, ರಾಚಪ್ಪ ನಾಯಕ, ವೆಂಕಟೇಶ ಜಕ್ಕಲದಿನ್ನಿ, ಮೇಶಾಕ ಕೆಂಪು, ಯಲ್ಲಪ್ಪ ಬಾಗಲವಾಡ, ಹುಲ್ಲೇಶ ಲಕ್ಕಂದಿನ್ನಿ, ಅಮರೇಶ ಚೌದ್ರಿ. ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಇದ್ದರು

ಸಿರುಗುಪ್ಪ : ಕನ್ನಡ ಸಾಹಿತ್ಯ ಪರಿಷತ್ ದತ್ತಿ ಉಪನ್ಯಾಸ ಕಾರ್ಯಕ್ರಮ ವಚನಗಳಿಂದ ಸಾಮಾಜಿಕ ಬದಲಾವಣೆ

ಸಿರುಗುಪ್ಪ,ಮಾ.05-

ವಚನಗಳು ಸಮಾಜದ ಪರಿವರ್ತನೆಗೆ ಮಾರ್ಗದರ್ಶಕ'ವಾಗಿವೆ ಎಂದು ಕೊಟ್ಟೂರು ಶ್ರೀದೇಶಿ ಕೇಂದ್ರ ಸ್ವಾಮೀಜಿ ಹೇಳಿದರು ಸಿರುಗುಪ್ಪ ನಗರದ ಶ್ರೀ ಗುರು ಸಾಂಸ್ಕೃತಿಕ ಭವನದಲ್ಲಿ ಸಿರುಗುಪ್ಪ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಮತ್ತು ಬಸವ ಬಳಗದಿಂದ ಜರುಗಿದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿ ಕಾಯಕ ತತ್ವ ಕುರಿತು ಹೇಳಿದರು ಬಸವರಾಜಪ್ಪ ಶರಣರು ನಿಲಯ ಪಾಲಕಿ ಅಮರೇಶ್ವರಿ ಮಲ್ಲಿಕಾರ್ಜುನ ಸುಮಂಗಳ ಶಿವಪ್ರಕಾಶ್ ದತ್ತಿ ಉಪನ್ಯಾಸಕ ನೀಡಿದರು ಬಸವ ಮಠದ ಬಸವ ಭೂಷಣ ಸ್ವಾಮೀಜಿ ಡಾ. ನಾ. ಮಾ ಶಿವ ಪ್ರಕಾಶ ಕನ್ನಡ ಸಾಹಿತ್ಯ ಪರಿಷತ್ ತಾಲೂಕ ಅಧ್ಯಕ್ಷ ಡಾ ಮಧುಸೂದನ್ ಕಾರಿಗನೂರ್ ಅವರು ಮಾತನಾಡಿ ದರು ಸಾಹಿತಿ ಶಿವಕುಮಾರ ಬಳೆಗಾರ ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷರು ಚೊಕ್ಕ ಬಸವನಗೌಡ ಮಹರ್ಷಿ ವಾಲ್ಮೀಕಿ ವಿದ್ಯಾಭಿವೃದ್ಧಿ ತಾಲೂಕ ಅಧ್ಯಕ್ಷ ಬಿಎಂ ಸತೀಶ್ ರಾಷ್ಟ್ರೀಯ ಸಾಕ್ಷರತಾ ಕನ್ನಡ ಸಾಹಿತ್ಯ ಪರಿಷತ್ ಸದಸ್ಯರು ಸಾಹಿತಿ ಅಬ್ದುಲ್ ನಬಿ ನಾಗನಗೌಡ ಮಲ್ಲಿಕಾರ್ಜುನ ಸ್ವಾಮಿ ನಾಂಚರಯ್ಯ ಮತ್ತಿತರರು ಇದ್ದರು .

ಕಲಬುರಗಿ ಐಟಿಎಫ್ ಮಹಿಳಾ ಟೆನಿಸ್ ಟೂರ್ನಿ : ಮುಖ್ಯ ಪಂದ್ಯಾವಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ





ಕಲಬುರಗಿ:

ನಗರದ ಚಂದ್ರಶೇಖರ್ ಪಾಟೀಲ್ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಕಲಬುರಗಿ ಐಟಿಎಫ್ ಮಹಿಳಾ ಟೆನಿಸ್ ಟೂರ್ನಿಯ ಮುಖ್ಯ ಸುತ್ತಿನ ಪಂದ್ಯಾವಳಿಗಳಿಗೆ ಮಂಗಳವಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಸಚಿವರಾದ ಪ್ರಿಯಾಂಕ್ ಖರ್ಗೆ, ಮತ್ತು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಇಲಾಖೆ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಅವರು ಬಲೂನ್ ಹಾರಿ ಬಿಡುವ ಮೂಲಕ ಚಾಲನೆ ನೀಡಿದರು.

ಮುಖ್ಯ ಪಂದ್ಯಾವಳಿಗಳ ಚಾಲನೆ ಕಾರ್ಯಕ್ರಮದಲ್ಲಿ ಇಂದು ಜಿಲ್ಲಾ ಉಸ್ತುವಾರಿ ಸಚಿವರಾದ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವವೃದ್ಧಿ ಇಲಾಖೆ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್, ಹಾಗೂ ವಿಧಾನ ಪರಿಷತ್ ಸದಸ್ಯರಾಧ ಶಶೀಲ್ ಜಿ.ನವೋಶಿ ಅವರು ಟೆನಿಸ್ ಆಡುವ ಮೂಲಕ ಅಧಿಕೃತವಾಗಿ ಮುಖ್ಯ ಪಂದ್ಯಾವಳಿಗಳಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಜಗದೇವ ಗುತ್ತೇದಾರ್, ತಿಪ್ಪಣ್ಣಪ್ಪ ಕಮಕನೂರ, ಕಲಬುರಗಿ ನಗರಾಭಿವೃದ್ಧಿ ನಗರದ ಪ್ರಾಧಿಕಾರದ ಅಧ್ಯಕ್ಷರಾದ ಮಜಹರ್ ಆಲಂ ಖಾನ್, ಜಿಲ್ಲಾಧಿಕಾರಿ ಫೌಝಿಯಾ ತರನ್ನುಮ್, ಸಿಇಓ ಭವಂರಸಿಂಗ್ ಮೀನಾ, ಮಹಾನಗರ ಪಾಲಿಕೆ ಪೂಜ್ಯ ಮಹಾಪೌರರಾದ ವರ್ಷಾ ಜಾನೆ, ಪಾಲಿಕೆ ಆಯುಕ್ತರಾದ ಅವಿನಾಶ ಸಿಂಧೆ, ಪೊಲೀಸ್ ಆಯುಕ್ತರಾದ ಡಾ. ಶರಣಪ್ಪ ಎಸ್.ಡಿ, ಎಸ್ಪಿ ಅಡ್ಡೂರು ಶ್ರೀನಿವಾಸುಲು, ಸಹಾಯಕ ಆಯುಕ್ತೆ ಸಾಹಿತ್ಯ, ಆಲದಕಟ್ಟಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಸಮದ್ ಪಟೇಲ್ ಅವರು ಸೇರಿದಂತೆ ಐಟಿಎಫ್ ಪಂದ್ಯ ಆಯೋಜಕರು, ಆಟಗಾರರು, ಪ್ರೇಕ್ಷಕರು ಸೇರಿದಂತೆ ಹಲವರು ಇದ್ದರು.

ತಾಳೂರಿನಲ್ಲಿ ಅಡುಗೆ ಸಿಲಿಂಡರ್ ಸ್ಫೋಟ : ಮನೆಗಳಿಗೆ ಹಾನಿ





ಬಳ್ಳಾರಿ,ಮಾ.05-

ಸಂಡೂರು ತಾಲೂಕಿನ ತಾಳೂರು ಗ್ರಾಮದಲ್ಲಿ ಅಡುಗೆ ಅನಿಲ ಸಿಲಿಂಡರ್ ಸ್ಫೋಟಗೊಂಡು ಮನೆ ಹಾಗೂ ಅಕ್ಕಪಕ್ಕದ ಮನೆಗಳಿಗೆ ಹಾನಿಯಾದ ಘಟನೆ ನಡೆದಿದೆ.

ತಾಳೂರು ಗ್ರಾಮದ ನಿವಾಸಿ ಸುಭಾನ್ ಸಾಬ್ ಅವರು ಕೆಲಸಕ್ಕೆ ತೆರಳುವ ಮುನ್ನ ಖಾಲಿ ಸಿಲಿಂಡರ್ ತೆಗೆದು ಹೊಸ ಸಿಲಿಂಡರ್ ಅಳವಡಿಸುತ್ತಿದ್ದ ವೇಳೆ ಏಕಾಏಕಿ ಅನಿಲ ಸೋರಿಕೆ ಆಗಿರುವುದನ್ನು ಗಮನಿಸಿದ್ದಾರೆ. ಗಾಬರಿಗೊಂಡ ಅವರು ತಕ್ಷಣ ಮನೆಯಿಂದ ಹೊರಬಂದಿದ್ದಾರೆ. ಕ್ಷಣಾರ್ಧದಲ್ಲಿ ಸಿಲಿಂಡರ್ ಸ್ಫೋಟಗೊಂಡು ಮನೆ ಸೇರಿದಂತೆ ಪಕ್ಕದ ಮನೆಗಳಿಗೂ ಹಾನಿ ಉಂಟಾಗಿದೆ. ಘಟನೆಯಲ್ಲಿ ಯಾವುದೇ ಜೀವಹಾನಿ ಸಂಭವಿಸಿಲ್ಲ ಎಂದು ತಿಳಿದುಬಂದಿದೆ.

ಸುದ್ದಿ ತಿಳಿದು ಸ್ಥಳಕ್ಕೆ ತೋರಣಗಲ್ ಪೊಲೀಸ್ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



ವಿಜಯನಗರ ,ಮಾ.05-

ಮಾರ್ಚ್ 2 ರಂದು ಬೆಂಗಳೂರಿನ ವಿಕಾಸಸೌಧದ 1 ನೇ ಮಹಡಿಯ ಕೊಠಡಿ ಸಂಖ್ಯೆ -122 ರಲ್ಲಿ ವಿಶ್ವಪಾರಂಪರಿಕ ಹಂಪಿಗೆ ಸಂಬಂಧಿಸಿದ ಸಮಸ್ಯೆ ಮತ್ತು ಮೂಲಭೂತ ಸೌಕರ್ಯಗಳ ಕುರಿತು ಭಾರತ ಸರ್ಕಾರದ ಪ್ರವಾಸೋದ್ಯಮ ಸಚಿವಾಲಯದ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಯಿತು. ಈ ವೇಳೆ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ, ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಆಯುಕ್ತ ರಮೇಶ್, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಪ್ರಭುಲಿಂಗ ತಳಕೇರಿ ಭಾಗವಹಿಸಿದ್ದರು.



ತುಂಗಭದ್ರಾ ನದಿಯಲ್ಲಿ ಇಬ್ಬರು ಯುವಕರು ಮುಳುಗಿ ಮೃತ್ಯು

ಗಂಗಾವತಿ,ಮಾ.05-

ಹೋಳಿ ಹಬ್ಬದ ಹಿನ್ನೆಲೆ ನದಿ ಸ್ನಾನಕ್ಕೆ ತೆರಳಿದ್ದ ಮೂವರು ಯುವಕರು ಆಕಸ್ಮಿಕವಾಗಿ ತುಂಗಭದ್ರಾ ನದಿಯಲ್ಲಿ ಮುಳುಗಿದ ಘಟನೆ ಬುಧವಾರ ಸಂಜೆ ನಡೆದಿದೆ.

ಈ ಪೈಕಿ ಒಬ್ಬ ಯುವಕ ಈಜಿ ದಡ ಸೇರಿದರೆ, ಇನ್ನಿಬ್ಬರು ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.

ಮೃತರನ್ನು ಗಂಗಾವತಿಯ ಗಾಂಧಿನಗರ ನಿವಾಸಿಗಳಾದ ಸೂರ್ಯ (17) ಹಾಗೂ ಅಭಿಷೇಕ (17) ಎಂದು ಗುರುತಿಸಲಾಗಿದೆ.

ಹೋಳಿ ಕಾರ್ಯಕ್ರಮಗಳ ಬಳಿಕ ಸ್ನೇಹಿತರೊಂದಿಗೆ ಊಟ ಮಾಡಿಕೊಂಡು ನದಿ ಸ್ನಾನಕ್ಕೆ ತೆರಳಿದ್ದ ವೇಳೆ ಕಾಲು ಜಾರಿ ನೀರಿನಲ್ಲಿ ಬಿದ್ದಿದ್ದಾರೆ ಎಂದು ತಿಳಿದು ಬಂದಿದೆ.

ಸ್ಥಳೀಯರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ತಕ್ಷಣ ಶೋಧ ಕಾರ್ಯಾಚರಣೆ ನಡೆಸಿ ವ'ೃತ'ದ'ೀಹ'ಗ'ಳ'ನ'್ನ ಹೊರತೆಗೆದಿದ್ದಾರೆ. ಪ್ರಕರಣ ಸಂಬಂಧ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ಹಬ್ಬದ ಸಂಭ್ರಮದಲ್ಲಿ ನದಿ-ಕೊಳಗಳಲ್ಲಿ ಸ್ನಾನ ಮಾಡುವಾಗ ಎಚ್ಚರಿಕೆ ವಹಿಸುವಂತೆ ಸಾರ್ವಜನಿಕರಿಗೆ ಪೊಲೀಸರು ಮನವಿ ಮಾಡಿದ್ದಾರೆ.

ಶ್ರೀ ಯೋಗಿನಾರೇಯಣ ಯತೀಂದ್ರರ ಜಯಂತಿ: ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ



ಕೊಪ್ಪಳ ಮಾ.04-

ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಶ್ರೀ ಯೋಗಿನಾರೇಯಣ ಯತೀಂದ್ರರ (ಕೈವಾರ ತಾತಯ್ಯ) ರವರ ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಸರಳವಾಗಿ ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಸಮಾಜದ ಬಂಧುಗಳು ಜೊತೆಯಲ್ಲಿ ಶ್ರೀ ಯೋಗಿನಾರೇಯಣ ಯತೀಂದ್ರರ (ಕೈವಾರ ತಾತಯ್ಯ) ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.

ಬಳಿಕ ಜಿಲ್ಲಾ ಚುನಾವಣಾ ಶಾಖೆಯ ತಹಾಸೀಲ್ದಾರ್ ರವಿಕುಮಾರ ವಸ್ತ್ರದ್ ಅವರ ಮಾತನಾಡಿ, ಕರ್ನಾಟಕದ ಪ್ರಸಿದ್ಧ ಸಂತರಲ್ಲಿ ಶ್ರೀ ಯೋಗಿನಾರೇಯಣ ಯತೀಂದ್ರರ (ಕೈವಾರ ತಾತಯ್ಯ) ನವರು ಪ್ರಮುಖರು.

ಇವರು ಸುಮಾರು 18ನೇ ಶತಮಾನದಲ್ಲಿ ಕರ್ನಾಟಕದ ಚಿಕ್ಕಬಳ್ಳಾಪುರ ಜಿಲ್ಲೆಯ ಕೈವಾರ ಗ್ರಾಮದಲ್ಲಿ ಜನಿಸಿದರು. ಕೈವಾರ ತಾತಯ್ಯನವರು ಧಾರ್ಮಿಕ ಜಾಗೃತಿ ಮೂಡಿಸಿದ ಮಹಾನ್ ಸಂತರು. ಅವರ ಉಪದೇಶಗಳು ಮಾನವ ಜೀವನಕ್ಕೆ ದಾರಿ ದೀಪವಾಗಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ ಜಿ., ಬಲಿಜ ಸಮಾಜದ ಮುಖಂಡರಾದ ಕೆ.ಶ್ರೀನಿವಾಸ ಕಟ್ಟಿಮನಿ, ನಾಗರಾಜ ಕನಕಗಿರಿ, ಸಹಕಾರ್ಯದರ್ಶಿ ಗೀರಿಶ್ ಕನಕಗಿರಿ, ಅಶೋಕ ಉಣಿಸಿಗಿಡ, ವಿನಯ ಕಟ್ಟಿಮನಿ, ತಿಪ್ಪಯ್ಯ ನಾಯ್ಡು ಎನ್., ವರಲಕ್ಷ್ಮೀ ಚಿಂತಪಲ್ಲಿ, ಲತಾ, ಸುವರ್ಣ, ನಾಗರತ್ನ, ರೇಖಾ, ಸರೋಜ, ರಕ್ಷಿತ್ ಸೇರಿದಂತೆ ಮತ್ತಿತರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ನಗುವುದರಿಂದ ಆಯುಷ್ಯ, ಆರೋಗ್ಯ ವೃದ್ಧಿ: ನಿಜಗುಣಪ್ರಭು ಸ್ವಾಮೀಜಿ

ಬೀದರ್, ಮಾ.05-

ಬಸವ ಸೇವಾ ಪ್ರತಿಷ್ಠಾನದ ವತಿಯಿಂದ ನಗರದ ಶರಣ ಉದ್ಯಾನದಲ್ಲಿ ಮಂಗಳವಾರ ಸಂಜೆ ಏರ್ಪಡಿಸಿದ್ದ ಶರಣ ಸಂಗಮ, ನಗೆಮಾರಿ ತಂದೆಗಳ ಸ್ಮರಣೋತ್ಸವ ಮತ್ತು ನಗೆಹಬ್ಬ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ನಗುವುದು ಸಹಜ ಧರ್ಮ, ನಗಿಸುವುದು ಪರಧರ್ಮ. ಬೇರೆಯವರ ನಗುವನ್ನು ಕೇಳಿಸಿಕೊಂಡು ನಗುವುದು ಅತಿಶಯವಾದ ಧರ್ಮ. ನಗುವುದರಿಂದ ಆರೋಗ್ಯ ವೃದ್ಧಿಯಾಗುತ್ತದೆ. ಆದಕಾರಣ ಪ್ರತಿಯೊಬ್ಬರೂ ಹಾಸ್ಯ ಪ್ರಜ್ಞೆ ಬೆಳೆಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷೆ ಗಂಗಾಂಬಿಕಾ ಅಕ್ಕ ನೇತೃತ್ವ ವಹಿಸಿ, ನಗಿಸುವುದು ಅಸಾಮಾನ್ಯ ಕಲೆ. ನಗುವ ಸಾಮರ್ಥ್ಯ ಇರುವುದು ಮನುಷ್ಯನಿಗೆ ಮಾತ್ರ. 12ನೇ ಶತಮಾನದ ನಗೆ ಮಾರಿ ತಂದೆಯವರು ಜನರನ್ನು ನಗಿಸುತ್ತಲೇ ಸುಂದರ ಬದುಕಿನ ತತ್ವಗಳನ್ನು ಸಾರುವುದು ಕಾಯಕವಾಗಿಸಿ ಕೊಂಡಿದ್ದರು. ಬಿಗುಮಾನ, ಅಹಂಕಾರ, ಇನ್ನೊಬ್ಬರ ಮನ ನೋಯಿಸದಂತೆ ಮನಸ್ಸು ಪೂರ್ತಿ ನಗುವುದರಿಂದ ಒತ್ತಡ ನಿವಾರಣೆಯಾಗಿ ಆನಂದ ಲಭಿಸುತ್ತದೆ ಎಂದರು.

ಇತ್ತೀಚೆಗೆ ಪದ್ಮಶ್ರೀ ಪ್ರಶಸ್ತಿ ಪಡೆದ ಬೆಂಗಳೂರಿನ ಸುಮಂಗಲಿ ಸೇವಾಶ್ರಮದ ಅಧ್ಯಕ್ಷೆ ಎಸ್.ಜಿ.ಸುಶೀಲಮ್ಮ ಅವರನ್ನು ಸನ್ಮಾನಿಸಲಾಯಿತು. ಬೀದರ್ ಮಹಾನಗರ ಪಾಲಿಕೆ ಉಪಮೇಯರ್ ಲಕ್ಷ್ಮೀಬಾಯಿ ಹಂಗರಗಿ ಉದ್ಘಾಟಿಸಿದರು.

ಅಂತರರಾಷ್ಟ್ರೀಯ ಹಗರಣಗಳಲ್ಲಿ ಮೋದಿ ಹೆಸರು: ಕಾಂಗ್ರೆಸ್



ಬಳ್ಳಾರಿ, ಮಾ.05-

ಜೆಫ್ರಿ ಎಪ್‌ಸ್ಟೀನ್‌ಗೆ ಸಂಬಂಧಿಸಿದ ದಾಖಲೆಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಹೆಸರಿನ ಉಲ್ಲೇಖ ಇರುವುದು, ದೇಶದ ನೈತಿಕತೆ ಮತ್ತು ಪಾರದರ್ಶಕತೆಯ ಬಗ್ಗೆ ಗಂಭೀರ ಪ್ರಶ್ನೆಗಳು ಏಳುವಂತೆ ಮಾಡಿದೆ. ಈ ಕುರಿತು ಕೇಂದ್ರ ಸರ್ಕಾರ ಈವರೆಗೆ ಸ್ಪಷ್ಟನೆ ನೀಡದೇ ಮೌನ ವಹಿಸಿರುವುದು ಖಂಡನೀಯ ಎಂದು ಯುವ ಕಾಂಗ್ರೆಸ್ ಆರೋಪಿಸಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಜಿಲ್ಲೆ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಶ್ರೀಕಾಂತ್ ಮತ್ತು ಮಂಜುನಾಥ್, ದೇಶದ ಪ್ರಧಾನ ಮಂತ್ರಿ ಹೆಸರೇ ಅಂತರಾಷ್ಟ್ರೀಯ ಮಟ್ಟದಲ್ಲಿ ಗಂಭೀರ ಹಗರಣದಲ್ಲಿ ಉಲ್ಲೇಖವಾಗಿರುವಾಗ ಕೇಂದ್ರ ಸರ್ಕಾರ ಮೌನ ವಹಿಸಿರುವುದು ಅಸಹ್ಯಕರ. ಇದು ಕೇವಲ ರಾಜಕೀಯ ವಿಚಾರವಲ್ಲ, ದೇಶದ ಗೌರವಕ್ಕೆ ಸಂಬಂಧಿಸಿದ ವಿಷಯ. ಕೇಂದ್ರ ಸರ್ಕಾರ ತಕ್ಷಣ ಜನತೆಗೆ ಸತ್ಯ ಹೇಳಬೇಕು ಹಾಗೂ ನೈತಿಕ ಹೊಣೆಗಾರಿಕೆ ಮೆರೆಯಬೇಕು ಎಂದು ಆಗ್ರಹಿಸಿದರು.

ಕೇಂದ್ರ ಸರ್ಕಾರದ ಮೌನದ ವಿರೋಧ್ದ ಧ್ವನಿ ಎತ್ತಲು ಹಾಗೂ ಸತ್ಯವನ್ನು ಜನತೆಗೆ ತಲುಪಿಸುವ ಉದ್ದೇಶದಿಂದ ಈ ಪ್ರತಿಭಟನೆ ನಡೆಸಲಾಗುತ್ತಿದೆ ಎಂದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಸರ್ಕಾರಿ ಹುದ್ದೆಗಳನ್ನು ಹರಾಜು ಹಾಕಿ, ಇಲ್ಲ ಕೆಪಿಎಸ್‌ಸಿಯನ್ನು ಮುಚ್ಚಿ



ಕಳೆದ ವರ್ಷ ಇದೇ ಸಂದರ್ಭದಲ್ಲಿ, ಇದೇ ಕೆಪಿಎಸ್‌ಸಿ ಬಗ್ಗೆ ಇಂಥದ್ದೇ ಗಂಭೀರ ಆರೋಪಗಳು ಕೇಳಿಬಂದಿದ್ದವು. ಆಗ ಜವಾಬ್ದಾರಿಯುತ ಸ್ಥಾನದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, 12.3.25ರಂದು ನಡೆದ ಬಜೆಟ್ ಅಧಿವೇಶನದಲ್ಲಿ, 'ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ, ಉಪ್ಪು ತಿಂದವರು ನೀರು ಕುಡಿಯಲೇಬೇಕು' ಎಂದು ಕಟುವಾಗಿ ಪ್ರತಿಕ್ರಿಯಿಸಿದ್ದರು.

ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್‌ಸಿ)ದಿಂದ 2023-24ನೇ ಸಾಲಿನ ಕೆಎಎಸ್ (ಗ್ರೂಪ್ ಎ ಮತ್ತು ಬಿ) ಹುದ್ದೆಗಳ ಮುಖ್ಯ ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದೆ. ಅದರ ಹಿಂದೆಯೇ, ಬೃಹತ್ ಅಕ್ರಮ ನಡೆದಿದೆ ಎಂಬ ಗಂಭೀರ ಆರೋಪವೂ ಕೇಳಿಬರುತ್ತಿದೆ.

ಕೆಪಿಎಸ್‌ಸಿ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತದೆ. ಗ್ರಾಮೀಣನಗರ, ವಿವಿಧ ವರ್ಗಗಳ ಅಭ್ಯರ್ಥಿಗಳಿಗೆ ಸಮಾನ ಅವಕಾಶ ಒದಗಿಸುತ್ತದೆ. ಆಯ್ಕೆಯಲ್ಲಿ ಸಾಮಾಜಿಕ ನ್ಯಾಯವನ್ನು ಅಳವಡಿಸಿಕೊಳ್ಳುತ್ತದೆ. ಗುಣಮಟ್ಟದ ಅಧಿಕಾರಿಗಳನ್ನು ರಾಜ್ಯಾಡಳಿತಕ್ಕೆ ನೀಡುತ್ತದೆ. ಇಂತಹ ಪ್ರಮುಖ ಮತ್ತು ಜವಾಬ್ದಾರಿಯುತ ಸಂಸ್ಥೆ ಕೆಪಿಎಸ್‌ಸಿ ಎಂಬುದು ನಾಡಿನ ಜನರ ನಂಬಿಕೆಯಾಗಿದೆ.

ಶತಾಯಗತಾಯ ಸರಕಾರಿ ಉದ್ಯೋಗ ಗಿಟ್ಟಿಸಿಕೊಳ್ಳಲೇಬೇಕೆಂಬ ಛಲ, ಮಹದಾಸೆ ಹೊತ್ತ ಅಭ್ಯರ್ಥಿಗಳು, ವರ್ಷಗಟ್ಟಲೆ ಕಷ್ಟಪಟ್ಟು ಓದಿ ಪರೀಕ್ಷೆ ಎದುರಿಸುತ್ತಾರೆ. ಫಲಿತಾಂಶ, ಆಯ್ಕೆ ಪಟ್ಟಿ ಪ್ರಕಟ, ನೇಮಕಾತಿ ಆದೇಶ ಪತ್ರಕ್ಕಾಗಿ ಚಾತಕಪಕ್ಷಿಗಳಂತೆ ಕಾಯುತ್ತಾರೆ. ಆದರೆ ಅವರಿಟ್ಟ ನಂಬಿಕೆಗೆ ವ್ಯತಿರಿಕ್ತವಾಗಿ ಫಲಿತಾಂಶಗಳು, ಪ್ರಕಟಣೆಗಳು ಹೊರಬೀಳುತ್ತವೆ. ಅಕ್ರಮ, ಅವ್ಯವಹಾರಗಳು ಮೇಳೈಸುತ್ತವೆ.

ಕೆಪಿಎಸ್‌ಸಿ ಮೇಲಿನ ಈ ಆರೋಪ ಹೊಸದಲ್ಲ. ಸಾಂವಿಧಾನಿಕ ಸಂಸ್ಥೆ ಕೆಟ್ಟಿರುವುದನ್ನು ಕಂಡ ಹೈಕೋರ್ಟ್ ಈ ಹಿಂದೆಯೇ, ನೇಮಕಾತಿ ಪರೀಕ್ಷೆಗಳ ಪರಿಶುದ್ಧತೆಯನ್ನು ಮರಳಿ ತರಬೇಕಾದರೆ ಕೆಪಿಎಸ್‌ಸಿಯನ್ನು ಸಂಪೂರ್ಣವಾಗಿ ಪುನರ್ ರಚಿಸಬೇಕು, ಗರಿಷ್ಠ ಬದ್ಧತೆ ಉಳ್ಳವರನ್ನು ನೇಮಿಸಬೇಕು ಎಂದು ಸರ್ಕಾರಕ್ಕೆ ಸಲಹೆ ನೀಡಿದ್ದಿದೆ. ಅಷ್ಟೇ ಅಲ್ಲ, ನ್ಯಾಯಕ್ಕಾಗಿ ಅಭ್ಯರ್ಥಿಗಳು ಪದೇ ಪದೇ ಕೋರ್ಟ್ ಮೆಟ್ಟಿಲು ಹತ್ತುವುದು ಮುಂದುವರೆದಾಗ, ಕರ್ನಾಟಕದ ಮರ್ಯಾದೆ ಕಾಪಾಡಲು, ಘನತೆ ಉಳಿಸಲು, ನ್ಯಾಯಯುತವಾಗಿ ನೇಮಕಾತಿ ಪ್ರಕ್ರಿಯೆ ನಡೆಯಲು ಕೇಂದ್ರ ಲೋಕಸೇವಾ ಆಯೋಗದ ಮಾದರಿಯ ಹೊಸ ಪದ್ಧತಿ ಅನುಷ್ಠಾನಕ್ಕೆ ತರಬೇಕು. ಲೋಪಗಳನ್ನು ಸರಿಪಡಿಸಲು ಸಾಧ್ಯವಿಲ್ಲದಿದ್ದರೆ, ಕೆಪಿಎಸ್‌ಸಿಯನ್ನು ರದ್ದು ಮಾಡಬೇಕು ಎಂದು ಹೈಕೋರ್ಟ್ ಕಟುವಾಗಿ ಹೇಳಿದ್ದೂ ಇದೆ.

ಆದರೂ, ಕೆಪಿಎಸ್‌ಸಿಗೆ ಕಾಲಕಾಲಕ್ಕೆ ಅಧ್ಯಕ್ಷರಿಂದ ಹಿಡಿದು ಸದಸ್ಯರವರೆಗೆ ನಡೆಯುವ ಆಯ್ಕೆ ಪ್ರಕ್ರಿಯೆ ನಿಂತಿಲ್ಲ. ಆ ಆಯ್ಕೆಯೂ ನ್ಯಾಯಸಮ್ಮತವಾಗಿಲ್ಲ. ಭ್ರಷ್ಟಾಚಾರ, ರಾಜಕೀಯ, ಜಾತಿ, ಲಾಬಿಗಳಿಂದ ಮುಕ್ತವಾಗಿಲ್ಲ. ಇದೆಲ್ಲವೂ ವ್ಯವಸ್ಥೆಯ ಭಾಗವಾಗಿರುವಾಗ, ಎದುರಾಗುವ ಆರೋಪಗಳಿಗೆ ಕೆಪಿಎಸ್‌ಸಿ ಕೂಡ ತಲೆಕೆಡಿಸಿಕೊಳ್ಳುತ್ತಿಲ್ಲ.

ಪ್ರಿಲಿಮ್ಸ್ ನಲ್ಲಿ 1ರಿಂದ 300 ಸೀರಿಯಲ್ ನಂಬರ್‌ವರೆಗಿನ ಯಾವ ಅಭ್ಯರ್ಥಿಯೂ ಆಯ್ಕೆಯಾಗಿಲ್ಲ ಎಂಬ ಗಂಭೀರ ಆರೋಪದ ನಡುವೆಯೇ ಆಯೋಗವು 1:3 ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ (ಸಂದರ್ಶನ) ಅರ್ಹತೆ ಪಡೆದ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದೆ. ಈ ಪಟ್ಟಿ ಕೂಡ ಈಗ ಹಲವು ಅನುಮಾನಗಳಿಗೆ ಕಾರಣವಾಗಿದೆ. ಒಂದೇ ಪರೀಕ್ಷಾ ಕೊಠಡಿಯಲ್ಲಿ ಪರೀಕ್ಷೆ ಬರೆದಿದ್ದ 15 ಮಂದಿ ಸಂದರ್ಶನಕ್ಕೆ ಆಯ್ಕೆಯಾಗಿರುವುದು ಅಕ್ರಮಕ್ಕೆ ಪುರಾವೆ ಒದಗಿಸುತ್ತಿದೆ. ಅವಕಾಶವಂಚಿತ ವಿದ್ಯಾರ್ಥಿಗಳಿಂದ, ತನಿಖೆ ನಡೆಸಬೇಕು ಎಂಬ ಒತ್ತಾಯ ಕೇಳಿಬರುತ್ತಿದೆ.

ಜೊತೆಗೆ ಒಂದೇ ಕುಟುಂಬದ ಮೂವರು ಅಭ್ಯರ್ಥಿಗಳು ಸಂದರ್ಶನಕ್ಕೆ ಆಯ್ಕೆಯಾಗಿದ್ದು, ಪ್ರಭಾವಿಗಳ ಮಕ್ಕಳಿಗೆ ಹುದ್ದೆ ಕೊಡಿಸಲು ತೆರೆಯ ಹಿಂದೆ ಷಡ್ಯಂತ್ರ ನಡೆದಿದೆ. ಇದು ಕೇವಲ ಕಾಕತಾಳೀಯವಲ್ಲ, ಇದರ ಹಿಂದೆ ದೊಡ್ಡ ಜಾಲವೇ ಅಡಗಿದೆ ಎಂಬುದು ಅವಕಾಶವಂಚಿತ ಅಭ್ಯರ್ಥಿಗಳ ದೂರಾಗಿದೆ. ಮುಂದುವರೆದು, ಒಂದು ವೇಳೆ, ಆ ಹದಿನೈದು ವಿದ್ಯಾರ್ಥಿಗಳ ರ್‍ಯಾಂಕ್ ಕ್ರಮಬದ್ಧವಾಗಿದ್ದರೆ, ಅವರೆಲ್ಲರ ಉತ್ತರ ಪತ್ರಿಕೆಗಳ ಪ್ರತಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕು. ಅವರು ತೆಗೆದುಕೊಂಡಿರುವ ಮಾಧ್ಯಮವನ್ನು ಕೂಡ ತಿಳಿಸಬೇಕು ಎಂದು ಒತ್ತಾಯಿಸಲಾಗುತ್ತಿದೆ.

ಅನ್ಯಾಯಕ್ಕೊಳಗಾದ ಅಭ್ಯರ್ಥಿಗಳು ಇಂತಹ ಸಮಯದಲ್ಲಿ ಸಾಮಾನ್ಯವಾಗಿ ಎಡತಾಕುವುದು ವಿರೋಧ ಪಕ್ಷಗಳನ್ನು. ಆದರೆ, ಆಡಳಿತ ಪಕ್ಷಕ್ಕಿಂತ ಹಳ್ಳ ಹಿಡಿದು ಕೂತಿರುವ ವಿರೋಧ ಪಕ್ಷಗಳಿಂದ ಕಣ್ಣೊರೆಸುವ ಪತ್ರಿಕಾ ಹೇಳಿಕೆಗಳಷ್ಟೇ ಬಿಡುಗಡೆಯಾಗಿವೆ. ಆಡಳಿತ ಮತ್ತು ವಿರೋಧ ಪಕ್ಷಗಳನ್ನು ನಂಬಿ ನಿರಾಶರಾದ ಹತಾಶ ಉದ್ಯೋಗಾಕಾಂಕ್ಷಿಗಳು, ಈಗ ಸಾಮಾಜಿಕ ಜಾಲತಾಣಗಳ ಮೊರೆ ಹೋಗಿದ್ದಾರೆ. ಎಂಬ ಹ್ಯಾಶ್‌ಟ್ಯಾಗ್ ಮೂಲಕ ತಮ್ಮೆಲ್ಲ ಆಕ್ರೋಶವನ್ನು ಹೊರಹಾಕುತ್ತಿದ್ದಾರೆ. ಅದು ಈಗ ಟ್ರೆಂಡ್ ಆಗುತ್ತಿದೆ. ಕೆಲವರು ಕೆಪಿಎಸ್‌ಸಿಯನ್ನು ಭ್ರಷ್ಟಾಚಾರದ ಕೂಪ ಎಂದು ಲೇವಡಿ ಮಾಡಿದ್ದಾರೆ. ಹಲವರು ರಾಜ್ಯಪಾಲರಿಗೆ ಪತ್ರ ಬರೆಯಲು ಮುಂದಾಗಿದ್ದಾರೆ. ಅಗತ್ಯವಿದ್ದರೆ ಪ್ರತಿಭಟನೆ ನಡೆಸುವುದಾಗಿ, ಕೋರ್ಟ್ ಮೆಟ್ಟಿಲು ಹತ್ತುವುದಾಗಿ ಎಚ್ಚರಿಸಿದ್ದಾರೆ.

ಹಾಗೆಯೇ ಈ ಭ್ರಷ್ಟ ವ್ಯವಸ್ಥೆಯಲ್ಲಿ ನಮ್ಮ ಶ್ರಮ, ಸಮಯ ವ್ಯರ್ಥವಾಗಿದೆ. ಬಡವರ ಮಕ್ಕಳು ಸರ್ಕಾರಿ ನೌಕರಿಯ ಕನಸು ಕಾಣುವುದೇ ಅಪರಾಧವಾಗಿದೆ. ಭವಿಷ್ಯ ಬರಿದಾಗಿದೆ ಎಂದು ಅಭ್ಯರ್ಥಿಗಳು ಅಸಹಾಯಕತೆ ತೋಡಿಕೊಂಡಿದ್ದಾರೆ.

ಆದರೆ ಕೆಪಿಎಸ್‌ಸಿ ಕಾರ್ಯದರ್ಶಿ ಜ್ಯೋತಿಯವರು, ಭ್ರಷ್ಟಾಚಾರ ನಡೆದಿಲ್ಲ, ಇದಕ್ಕಾಗಿ ಯಾವುದೇ ಪ್ರತ್ಯೇಕ ಸಮಿತಿ ರಚಿಸುವುದಿಲ್ಲ ಎಂದು ಹೇಳಿದ್ದಾರೆ. ಸುಮಾರು 5,700ಕ್ಕೂ ಅಧಿಕ ಅಭ್ಯರ್ಥಿಗಳು ಕೆಎಎಸ್ ಪರೀಕ್ಷೆ ಬರೆದಿದ್ದಾರೆ. ಒಂದು ಕೊಠಡಿಯಲ್ಲಿ 24 ಅಭ್ಯರ್ಥಿಗಳು ಇರುತ್ತಾರೆ. ಅದರಲ್ಲಿ 10ರಿಂದ 12 ಅಭ್ಯರ್ಥಿಗಳು ಆಯ್ಕೆಯಾಗುವುದು ಸಂಭವನೀಯ. ಆದರೆ, ಕೆಪಿಎಸ್‌ಸಿ ಇತಿಹಾಸದಲ್ಲಿ ಒಂದೇ ರೂಮ್‌ನಲ್ಲಿ ಇಷ್ಟು ಹೆಚ್ಚಿನ ಸಂಖ್ಯೆಯ ಅಭ್ಯರ್ಥಿಗಳು ಪಾಸ್ ಆಗಿರುವುದು ಇದೇ ಮೊದಲು. ಇದಕ್ಕೆ ಕೆಪಿಎಸ್‌ಸಿ ಕಾರ್ಯದರ್ಶಿಗಳಿಂದ ಉತ್ತರವಿಲ್ಲ.

ಕೆಪಿಎಸ್‌ಸಿ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತದೆ ಎಂಬ ನಂಬಿಕೆ ಹೋಗಿ ಯಾವುದೋ ಕಾಲವಾಗಿದೆ. ಅದಕ್ಕೆ ಪೂರಕವಾಗಿ ಅಧಿಸೂಚನೆ, ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷಾ ವಿಳಂಬಗಳು, ಆಯ್ಕೆ ವಿಧಾನಗಳು, ನೇಮಕಾತಿ ಪ್ರಕ್ರಿಯೆಗಳ ವಿರುದ್ಧ ನ್ಯಾಯಾಲಯಕ್ಕೆ ದೂರು ಎಲ್ಲವೂ ಜೊತೆಯಾಗಿವೆ. ಉದ್ಯೋಗಾಕಾಂಕ್ಷಿಗಳ ವಿಶ್ವಾಸವೇ ಕಮರಿಹೋಗಿದೆ.

ಕೆಪಿಎಸ್ಸಿ ಸಂಸ್ಥೆ ಜೀವಂತವಾಗಿದೆಯೇ ಅಥವಾ ಸತ್ತುಹೋಗಿದೆಯೇ ಎಂಬ ಸಂಶಯ, ಅನುಮಾನ ಮತ್ತು ಆಕ್ರೋಶ ಉದ್ಯೋಗಾಕಾಂಕ್ಷಿಗಳಲ್ಲಿ ಮೂಡಿದೆ. ನ್ಯಾಯಾಲಯ, ಕಾನೂನು ಮತ್ತು ಸರಕಾರದ ಭಯವೇ ಇಲ್ಲದ ಈ ನಿಷ್ಕ್ರಿಯ, ಲಂಚಬಾಕ ಸಂಸ್ಥೆಯಿಂದ ಪ್ರತಿಭಾವಂತರಿಗೆ ಕೆಲಸ ಸಿಗುವುದು ಸಾಧ್ಯವೇ ಇಲ್ಲ ಎನಿಸಿದೆ. ಹೀಗಾಗಿ ತೆರೆಮರೆಯಲ್ಲಿ ನಡೆಯುತ್ತಿರುವ ವ್ಯವಹಾರವನ್ನು ಕೆಪಿಎಸ್‌ಸಿ ಕಾನೂನುಬದ್ಧಗೊಳಿಸಿ, ಇಂತಿಂತಹ ಹುದ್ದೆಗೆ ಇಂತಿಷ್ಟು ಎಂದು ಬಹಿರಂಗ ಹರಾಜು ನಡೆಸಲಿ, ಇಲ್ಲ ಸಂಸ್ಥೆಯನ್ನು ಶಾಶ್ವತವಾಗಿ ಮುಚ್ಚಲಿ ಎಂಬುದು ಉದ್ಯೋಗಾಕಾಂಕ್ಷಿಗಳ ಹತಾಶೆಯ ನುಡಿಗಳಾಗಿವೆ.

ಕಳೆದ ವರ್ಷ ಇದೇ ಸಂದರ್ಭದಲ್ಲಿ, ಇದೇ ಕೆಪಿಎಸ್‌ಸಿ ಬಗ್ಗೆ ಇಂಥದ್ದೇ ಗಂಭೀರ ಆರೋಪಗಳು ಕೇಳಿಬಂದಿದ್ದವು. ಆಗ ಜವಾಬ್ದಾರಿಯುತ ಸ್ಥಾನದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, 12.3.25ರಂದು ನಡೆದ ಬಜೆಟ್ ಅಧಿವೇಶನದಲ್ಲಿ, ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ, ಉಪ್ಪು ತಿಂದವರು ನೀರು ಕುಡಿಯಲೇಬೇಕು ಎಂದು ಕಟುವಾಗಿ ಪ್ರತಿಕ್ರಿಯಿಸಿದ್ದರು. ಮುಂದುವರೆದು ಕೆಪಿಎಸ್ಸಿ ಗೆ ಕಾಯಕಲ್ಪ ತರುವ ನಿಟ್ಟಿನಲ್ಲಿ, ಕೆಪಿಎಸ್‌ಸಿ ಸದಸ್ಯರ ಸಂಖ್ಯೆ ಕಡಿಮೆ ಮಾಡುವುದು, ಸದಸ್ಯರ ಆಯ್ಕೆಗೆ ಸರ್ಚ್ ಕಮಿಟಿ ರಚಿಸುವುದು, ಮುಂದೆ ಆದಷ್ಟು ಪ್ರಾಮಾಣಿಕವಾಗಿ ಇರುವವರನ್ನು ನೇಮಕ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂಬ ಭರವಸೆಯನ್ನು ಸರ್ಕಾರದ ಪರವಾಗಿ ನಾಡಿಗೆ ನೀಡಿದ್ದರು. ಇದಾಗಿ ಒಂದು ವರ್ಷ ಕಳೆದಿದೆ. ಇದೇ ಶುಕ್ರವಾರದಿಂದ ಬಜೆಟ್ ಅಧಿವೇಶನ ಆರಂಭವಾಗಲಿದೆ. ಸಿದ್ದರಾಮಯ್ಯನವರು ಮುಖ್ಯಮಂತ್ರಿಗಳಾಗಿ ಮುಂದುವರೆದಿದ್ದಾರೆ. ಅದೇ ಕೆಪಿಎಸ್‌ಸಿ ಬಗ್ಗೆ ಅಂಥದ್ದೇ ಗಂಭೀರ ಆರೋಪಗಳು ಕೇಳಿಬರುತ್ತಿವೆ. ಇದು ಏನನ್ನು ಸೂಚಿಸುತ್ತದೆ? ಇದು ಪ್ರಜೆಗಳು ಆಯ್ಕೆ ಮಾಡಿದ ಪ್ರಜಾಸತ್ತಾತ್ಮಕ ಸರ್ಕಾರವೇ?

6ನೇ ದಿನಕ್ಕೆ ಕಾಲಿಟ್ಟ ಕದನ; ಖಮೇನಿ ಭೇಟಿ ನೀಡಿದ್ದ ಅಲಿಪುರ ಈಗ ಹೇಗಿದೆ?



ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಅತ್ತ ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ಇರಾನ್ ಮೇಲೆ ದಾಳಿ ನಡೆಸುತ್ತಿವೆ. ಇತ್ತ ತಮ್ಮ ನಾಯಕನನ್ನು ಕಳೆದುಕೊಂಡ ಇರಾನ್ ಭೀಕರ ಪ್ರತಿದಾಳಿ ನಡೆಸುತ್ತಿದೆ. ಈ ಘನ ಘೋರ ಯುದ್ಧ 6ನೇ ದಿನಕ್ಕೆ ಕಾಲಿಟ್ಟಿದೆ. ಯುದ್ಧ ಕೊನೆಗೊಳ್ಳುವ ಲಕ್ಷಣಗಳಂತೂ ಕಾಣುತ್ತಿಲ್ಲ. ಈ ಮಧ್ಯೆ ಕರ್ನಾಟಕದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿರುವ ಮಿನಿ ಇರಾನ್ ಎಂದು ಕರೆಸಿಕೊಳ್ಳುವ ಅಲಿಪುರ ಗ್ರಾಮದಲ್ಲಿಯೂ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.

ಅಲಿಪುರ ಹಾಗೂ ಇರಾನ್ ದೇಶಕ್ಕೆ ಬಹಳ ಅನ್ಯೋನ್ಯವಾದ ಸಂಬಂಧ ಇದೆ. ಇಡೀ ದಕ್ಷಿಣ ಭಾರತದಲ್ಲಿ ಅತಿ ಹೆಚ್ಚು ಶಿಯಾ ಪಂಗಡದ ಮುಸ್ಲಿಮರು ಅಲಿಪುರದಲ್ಲೇ ನೆಲೆಸಿರುವ ಹಿನ್ನೆಲೆಯಲ್ಲಿ 1981ರಲ್ಲಿ ಈ ಗ್ರಾಮಕ್ಕೆ ಇರಾನ್ ಸುಪ್ರೀಂ ನಾಯಕ ಖಮೇನಿ ಭೇಟಿ ನೀಡಿದ್ದರು. ಖಮೇನಿ ರವರ ಹತ್ಯೆಯ ಸುದ್ದಿ ಹೊರ ಬರುತ್ತಿದ್ದಂತೆ ಅಲಿಪುರದ ಅಂಗಡಿಗಳನ್ನು ಬಂದ್ ಮಾಡಿ ಅಮೆರಿಕ ಹಾಗೂ ಇಸ್ರೇಲ್ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟನೆ ಮಾಡಲಾಗಿದೆ. ಅಲ್ಲಿನ ಶಿಯಾ ಮುಸಲ್ಮಾನರು ಮೂರು ದಿನಗಳ ಕಾಲ ಶೋಕಾಚರಣೆ ಮಾಡಿದ್ದಾರೆ.

ಇರಾನ್ ಸುಪ್ರೀಂ ನಾಯಕ ಖಮೇನಿ ಅವರ ಮಾನವೀಯ ಗುಣಗಳನ್ನು ಅಲಿಪುರದ ಶಿಯಾಗಳು ಅಳವಡಿಸಿಕೊಂಡಿದ್ದಾರೆ. ಇಲ್ಲಿನ ಸುಮಾರು ವಿದ್ಯಾರ್ಥಿಗಳು ಇರಾನ್ ನಲ್ಲಿ ವೈದ್ಯಕೀಯ ಶಿಕ್ಷಣ ಪಡೆಯುತ್ತಿದ್ದಾರೆ. ವ್ಯಾಪಾರ ವೃತ್ತಿಯಲ್ಲಿಯು ತೊಡಗಿಸಿಕೊಂಡಿದ್ದಾರೆ. 1981 ರಲ್ಲಿ ಖಮೇನಿ ಅವರು ಭೇಟಿ ನೀಡಿ ಆಸ್ಪತ್ರೆಯನ್ನು ಉದ್ಘಾಟಿಸಿದ್ದಾರೆ. ಅಮೆರಿಕ ಮತ್ತು ಇಸ್ರೇಲ್ ಇರಾನ್ ಮೇಲೆ ಏಕಾಏಕಿ ಯುದ್ಧ ಮಾಡಿ ಮಾನವಿಯತೆಯ ವಿರುದ್ಧವಾಗಿ ನಡೆದುಕೊಂಡಿದ್ದಾರೆ ನಮ್ಮ ಭಾರತ ದೇಶದ ಸರ್ಕಾರ ಈ ಘಟನೆಯನ್ನು ಖಂಡಿಸಬೇಕು ಎಂದು ಅಲಿಪುರ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಕಳೆದ ವರ್ಷ ಪ್ಯಾಲೆಸ್ತೀನ್ ಪರವಾಗಿ ಇರಾನ್ ನಿಂತಿದ್ದಕ್ಕೆ ಈ ರೀತಿ ಮಾಡಿದ್ದಾರೆ ಇರಾನ್ ಯಾವತ್ತಿಗೂ ಅಮೆರಿಕ ಮತ್ತು ಇಸ್ರೇಲ್ ನಂತೆ ಶಾಲಾ ಕಾಲೇಜುಗಳ ಮೇಲೆ, ಆಸ್ಪತ್ರೆಗಳ ಮೇಲೆ ದಾಳಿ ಮಾಡಿಲ್ಲ. ಆದರೆ ಅಮೆರಿಕದ ಕುತಂತ್ರದಿಂದ ಇರಾನ್ ಕಾಲೇಜಿನ ಹಲವಾರು ವಿದ್ಯಾರ್ಥಿಗಳು ಮರಣ ಹೊಂದಿದ್ದಾರೆ. ನಾವೇ ಸುಪ್ರೀಂ ನಾವು ಹೇಳಿದ ರೀತಿ ಕೇಳಬೇಕು ಅನ್ನುವ ಅಮೆರಿಕ-ಇಸ್ರೇಲ್ ವಾದವನ್ನು ಕೇಳದ್ದಕ್ಕೆ ಖಮೇನಿ ಅವರನ್ನು ಹತ್ಯೆ ಮಾಡಿದ್ದಾರೆ. ಇದನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ ಎನ್ನುತ್ತಾರೆ ಅಲಿಪುರ ಅಂಜುಮನ್ ಅಧ್ಯಕ್ಷ ಅಲಿ ಅಬ್ಬಾಸ್.

ಅಲಿಪುರದ ಸ್ಥಳೀಯ ನಿವಾಸಿ ರೋಶನ್ ಈ ದಿನಕ್ಕೆ ಪ್ರತಿಕ್ರಿಯಿಸಿ, ''ಖಮೇನಿ ಅವರನ್ನು ಮೋಸದಿಂದ ಹತ್ಯೆ ಮಾಡಲಾಗಿದೆ. ಇವರು ಕೇವಲ ಮುಸ್ಲಿಮರಿಗೆ ನಾಯಕರಾಗಿರಲಿಲ್ಲ. ಇಡೀ ಪ್ರಪಂಚಕ್ಕೆ ನಾಯಕರಾಗಿದ್ರು. ನ್ಯಾಯಕ್ಕೆ ನ್ಯಾಯ, ಅನ್ಯಾಯಕ್ಕೆ ಅನ್ಯಾಯ ಎಂದು ಹೇಳುತ್ತಿದ್ದ ವ್ಯಕ್ತಿ ನಮಗೆ ಮರಳಿ ಸಿಗಬೇಕಾದರೆ ಬಹಳ ಕಷ್ಟವಿದೆ. ಅಲಿಪುರದಿಂದ ಇರಾನ್ ಗೆ ಸುಮಾರು 120 ರಿಂದ 140 ಜನ ವಿದ್ಯಾಭ್ಯಾಸ ಹಾಗೂ ವ್ಯವಹಾರ ಉದ್ದೇಶದಿಂದ ಹೋಗಿ ಜೀವನ ಕಟ್ಟಿಕೊಂಡಿದ್ದಾರೆ. ಸದ್ಯ ಯುದ್ಧದ ಪರಿಸ್ಥಿತಿಯಿಂದ ನಾವು ಆತಂಕದಲ್ಲಿದ್ದೇವೆ. ಇರಾನ್ ರಾಯಭಾರಿ ಕಚೇರಿ ಹಾಗೂ ಭಾರತ ಸರ್ಕಾರ ಅಲ್ಲಿನ ಭಾರತೀಯರನ್ನು ಕರೆತರಲು ಬೆಂಬಲ ನೀಡುತ್ತಿವೆ. ನನ್ನ ಮಗಳು ಇರಾನ್ ನಲ್ಲಿ ವೈದ್ಯಕೀಯ ಶಿಕ್ಷಣ ಮುಗಿಸಿ, ಅಲ್ಲಿನ ಆಸ್ಪತ್ರೆಯಲ್ಲಿ ತರಬೇತಿ ಪಡೆಯುತ್ತಿದ್ದಾಳೆ. ಬಾಂಬ್ ಬಿದ್ದ ಬಳಿಕ ಟೆಹ್ರಾನ್‌ನಿಂದ ಸ್ಥಳಾಂತರವಾಗಿದ್ದು, ಜೋಪಾನವಾಗಿದ್ದೇವೆ ಎಂದು ಫೋನ್ ಕಾಲ್ ಮೂಲಕ ತಿಳಿಸಿದ್ದಾಳೆ. ಆದರೆ ನಾವು ಆತಂಕದಲ್ಲೇ ಇರುವಂತಾಗಿದೆ'' ಎಂದರು.

ಅಲಿಪುರ ಅಂಜುಮನ್ ಜಾಫರೀಯ ಕಾರ್ಯದರ್ಶಿ ಫಾಜೀಲ್ ರಜಾ ಮಾತನಾಡಿ, ''ಅಮೆರಿಕ, ಇಸ್ರೇಲ್ ನಮ್ಮ ಇರಾನ್ ಸುಪ್ರೀಂ ಲೀಡರ್ನ್ನು ಹತ್ಯೆ ಮಾಡಿರುವ ಸುದ್ದಿ ಕೇಳಿ ಬಹಳ ನೋವಾಗಿದೆ. ಅಲಿಪುರದಲ್ಲಿ ಅಂಗಡಿಗಳನ್ನು ಬಂದ್ ಮಾಡಿ ಶೋಕಾಚರಣೆ ಮಾಡಿದ್ವಿ. ಖಮೇನಿ ಅವರು ಕೇವಲ ಧರ್ಮಗುರು ಅಲ್ಲ ಸತ್ಯ, ನ್ಯಾಯ, ಮನುಷ್ಯತ್ವಕ್ಕಾಗಿ ಶ್ರಮಿಸಿದವರು. ಪ್ಯಾಲೆಸ್ತೀನ್ ಹಾಗೂ ಗಾಜಾದಲ್ಲಿ ಅಮೆರಿಕ ಹಾಗೂ ಇರಾನ್ ನ ದುಷ್ಕರ್ಮಿಗಳು ಚಿಕ್ಕ ಮಕ್ಕಳ ಮೇಲೆ ಸಹ ಬಾಂಬ್ ಹಾಕಿ ಅವರನ್ನು ಸಾಯಿಸಿದ್ದಾರೆ. ಇಷ್ಟಾದ್ರು ಪ್ಯಾಲೆಸ್ತೀನ್ ನವರಿಗೆ ಯಾರು ಬೆಂಬಲ ನೀಡದ ಸಂದರ್ಭದಲ್ಲಿ ಇರಾನ್ ಬೆಂಬಲ ನೀಡಿತ್ತು. ಈ ಸಾವನ್ನು ಸಾವು ಅಂತ ಸ್ವೀಕಾರ ಮಾಡಲ್ಲ, ಅದನ್ನು ನಾವು ಬಲಿದಾನ ಅಂತ ಹೇಳ್ತೇವೆ. ಈ ಪ್ರಪಂಚದಿಂದ ಖಮೇನಿ ಅವರ ದೇಹ ಮಾತ್ರ ಹೋಗಿದೆ, ಆದ್ರೆ ಅವರ ನೀತಿ, ಪದ್ಧತಿ, ಅವರ ಮಾರ್ಗದರ್ಶನ ನಮ್ಮ ಹೃದಯದಲ್ಲಿದೆ'' ಎಂದರು.

ಈ ಹಿಂದೆ ಕರ್ಬಾಲ ಮೈದಾನದಲ್ಲಿ ಇಮಾಮ್ ಹುಸೇನ್ ರವರು ಯಹೂದಿ ರವರಿಗೆ ಬಗ್ಗದೆ ಹೋರಾಟ ಮಾಡಿದ್ರು ಅವರ ಹಾದಿಯಲ್ಲಿ ಖಮೇನಿ ನಡೆದಿದ್ದಾರೆ. ಇರಾನ್ ನಲ್ಲಿ ಅಲಿಪುರದ ನೂರಕ್ಕೂ ಹೆಚ್ಚು ಜನರಿದ್ದು ಕಳೆದ ವರ್ಷ ಯುದ್ಧದ ಸಂದರ್ಭದಲ್ಲಿ ಭಾರತ ಸರ್ಕಾರ ಅವರನ್ನು ಯಾವ ರೀತಿ ಸೇಫ್ ಆಗಿ ದೇಶಕ್ಕೆ ಮರಳಿ ಕರೆದುಕೊಂಡು ಬಂದ್ರು, ಅದೇ ರೀತಿ ಈ ಬಾರಿಯೂ ಅಲಿಪುರದ ಜನರಿಗೆ ಇರಾನ್ ನಿಂದ ವಾಪಸ್ ಕರೆಸಿಕೊಳ್ಳಬೇಕು'' ಎಂದು ಗ್ರಾಮಸ್ಥರು ವಿನಂತಿಸಿದರು.

ಅಲಿಪುರ ಐ.ಕೆ ಆಸ್ಪತ್ರೆಯ ವೈದ್ಯ ಮೀರ್ ನದೀಂ, ''ಅಮೆರಿಕ ಮತ್ತು ಇಸ್ರೇಲ್ ಹೇಳಿದ ಹಾಗೆ ಇರಾನ್ ಕೇಳಿಲ್ಲ. ಅದೇ ದ್ವೇಷದಿಂದ ಹತ್ಯೆ ಮಾಡಲಾಗಿದೆ. ಖಮೇನಿ ಅವರು ಭೇಟಿ ನೀಡಿದ್ದ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗಲು ಒಂದು ಆಸ್ಪತ್ರೆ ನಿರ್ಮಾಣ ಮಾಡಿ ಎಂದು ನಮಗೆ ಸಲಹೆ ನೀಡಿದ್ದರು. ಇರಾನ್ ದೇಶದಲ್ಲಿ ಮಹಾತ್ಮ ಗಾಂಧಿ ಆಸ್ಪತ್ರೆ ಹಾಗೂ ಮಹಾತ್ಮ ಗಾಂಧಿ ರಸ್ತೆ ಇದೆ, ಯಾಕಂದ್ರೆ ಭಾರತ ಮತ್ತು ಇರಾನ್ ದೇಶದ ಸಂಬಂಧ ಒಳ್ಳೆಯ ರೀತಿಯಲ್ಲಿ ಇದೆ. ಅಲಿಪುರದಿಂದ ಇರಾನ್ ಗೆ 30 ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣಕ್ಕೆ ಹೋಗಿದ್ದಾರೆ ಮತ್ತು ವ್ಯಾಪಾರಕ್ಕೂ ಸಹ ಹಲವಾರು ಜನರು ಹೋಗಿದ್ದಾರೆ. ಕೂಡಲೇ ಎಲ್ಲರೂ ಸಹ ಯುದ್ಧವನ್ನು ನಿಲ್ಲಿಸಿ ಶಾಂತಿಯನ್ನು ಕಾಪಾಡಿ ಆಡಳಿತ ಮಾಡಿಕೊಂಡು ಹೋಗಬೇಕು'' ಎಂದು ಮನವಿ ಮಾಡಿದರು.

ಮಧ್ಯಪ್ರಾಚ್ಯದಲ್ಲಿ ಉರಿಯುತ್ತಿರುವ ಯುದ್ಧದ ಬೆಂಕಿ ಸಾವಿರಾರು ಕಿಲೋಮೀಟರ್ ದೂರದಲ್ಲಿರುವ ಅಲಿಪುರಂತಹ ಗ್ರಾಮಗಳಿಗೂ ತಲುಪುತ್ತಿವೆ. ಇರಾನ್‌ನೊಂದಿಗೆ ಐತಿಹಾಸಿಕ, ಧಾರ್ಮಿಕ ಹಾಗೂ ಮಾನವೀಯ ಸಂಬಂಧ ಹೊಂದಿರುವ ಅಲಿಪುರದ ಜನರು ಯುದ್ಧದ ಬೆಳವಣಿಗೆಗಳನ್ನು ಆತಂಕದಿಂದ ಗಮನಿಸುತ್ತಿದ್ದಾರೆ. ಅಲ್ಲಿ ವಿದ್ಯಾಭ್ಯಾಸ ಹಾಗೂ ಉದ್ಯೋಗದ ನಿಮಿತ್ತ ಇರುವ ತಮ್ಮ ಕುಟುಂಬ ಸದಸ್ಯರ ಸುರಕ್ಷತೆಗಾಗಿ ಅವರು ಕಳವಳ ವ್ಯಕ್ತಪಡಿಸುತ್ತಿದ್ದು, ಶಾಂತಿ ಸ್ಥಾಪನೆಯಾಗಬೇಕು ಎಂಬ ಆಶೆಯನ್ನು ವ್ಯಕ್ತಪಡಿಸುತ್ತಿದ್ದಾರೆ. ಯುದ್ಧದ ಹೊಗೆ ದೂರದ ದೇಶಗಳನ್ನೂ, ಸಣ್ಣ ಗ್ರಾಮಗಳನ್ನೂ ತಟ್ಟುವ ಈ ಸಂದರ್ಭ ಜಗತ್ತಿನ ನಾಯಕರು ಸಂಘರ್ಷವನ್ನು ಕೊನೆಗೊಳಿಸಿ ಮಾನವೀಯತೆ ಮತ್ತು ಶಾಂತಿಗೆ ಆದ್ಯತೆ ನೀಡಬೇಕೆಂದು ಎದುರು ನೋಡುತ್ತಿದ್ದಾರೆ.

ರಾಜ್ಯ ಬಜೆಟ್‌ನತ್ತ ಬಾಗಲಕೋಟೆ ಜಿಲ್ಲೆಯ ಜನರ ಚಿತ್ತ!

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಮಂಡಿಸಲಿರುವ 4.5 ಲಕ್ಷ ಕೋಟಿ ರೂ. ಗಾತ್ರದ ಈ ಸಾಲಿನ ರಾಜ್ಯ ಸರ್ಕಾರದ ಬಜೆಟ್ ಹೇಗಿರಬಹುದು ಎಂಬ ಕುತೂಹಲ ರಾಜ್ಯದ ಜನರಲ್ಲಿ ಇರುವಂತೆ ಬಾಗಲಕೋಟೆ ಜಿಲ್ಲೆಯ ಜನರಲ್ಲಿಯೂ ಇದೆ.

ಪ್ರತ್ಯೇಕ ಜಿಲ್ಲೆಯಾಗಿ ಮೂರು ದಶಕದ ಹೊಸ್ತಿಲಲ್ಲಿ ನಿಂತಿರುವ ಬಾಗಲಕೋಟೆ ಜಿಲ್ಲೆ, ರಾಜಕೀಯ ಕಷ್ಟ ಕಾಲದಲ್ಲಿ ಸಿದ್ದರಾಮಯ್ಯ ಅವರ ಕೈಹಿಡಿದು ಅವರನ್ನು ರಾಜಕೀಯ ಮೇಲಿನ ಸ್ತರದಲ್ಲೇ ನಿಲ್ಲಿಸಿದೆ. ಅವರು ಬಾದಾಮಿ ಕ್ಷೇತ್ರದಿಂದ ಗೆದ್ದು ಹೋಗಿ ವಿರೋಧ ಪಕ್ಷದ ನಾಯಕನಾಗಿ ಎರಡನೇ ಅವಧಿಗೆ ಸಿಎಂ ಆಗಲು ಭದ್ರ ಅಡಿಪಾಯ ಹಾಕಿದ ಈ ಜಿಲ್ಲೆಗೆ 2023-24, 2024-25ನೇ ಸಾಲಿನ ಬಜೆಟ್ ನಲ್ಲಿ ಅಂತಹ ಎದ್ದು ಕಾಣುವಂತಹ ಕೊಡುಗೆಯನ್ನು ಅವರು ನೀಡಿಲ್ಲ.

ರಾಜ್ಯ ರಾಜಕೀಯದಲ್ಲಿ ಸಂಚಲನ ಉಂಟು ಮಾಡುವ ಸಾಧ್ಯತೆ ಇರುವ ಬಾಗಲಕೋಟೆ ವಿಧಾನಸಭೆ ಕ್ಷೇತ್ರದ ಮರುಚುನಾವಣೆ ಹತ್ತಿರದಲ್ಲಿದೆ. ರಾಜ್ಯ ಬಜೆಟ್ ಅಧಿವೇಶನದ ಸಂದರ್ಭದಲ್ಲೇ ಈ ಕ್ಷೇತ್ರದ ಮರುಚುನಾವಣೆ ದಿನಾಂಕ ಘೋಷಣೆ ಆಗಲಿದೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಶತಾಯಗತಾಯ ಗೆಲ್ಲಲೇಬೇಕಾಗಿದೆ. ಈ ಚುನಾವಣೆ ಸಿದ್ದರಾಮಯ್ಯ ಅವರ ಪ್ರತಿಷ್ಠೆಯನ್ನು ಒರೆಗೆ ಹಚ್ಚುವ ಚುನಾವಣೆ ಆಗಲಿದೆ. ಯಾಕೆಂದರೆ ಸಿಎಂ ಅವರ ಕಟ್ಟಾ ಬೆಂಬಲಿಗರಾಗಿದ್ದ ಮೇಟಿ ಅವರು ಪ್ರತಿನಿಧಿಸಿದ್ದ ಕ್ಷೇತ್ರ ಇದು. ಮರಳಿ ಕಾಂಗ್ರೆಸ್ ಮಡಿಲಿಗೆ ಈ ಕ್ಷೇತ್ರ ತಂದುಕೊಡುವುದು ಸಿಎಂ ಅವರಿಗೆ ಪ್ರಮುಖ ಆದ್ಯತೆ ಆಗಲಿದೆ. ಆ ಕಾರಣದಿಂದಲೂ ಸಿಎಂ ಬಾಗಲಕೋಟೆ ಜಿಲ್ಲೆಯ ಜನರ ಮನಸ್ಸು ಗೆಲ್ಲಲು ಬಜೆಟ್ ನಲ್ಲಿ ತಂತ್ರಗಾರಿಕೆ ಮಾಡಬಹುದೆಂದು ನಿರೀಕ್ಷಿಸಲಾಗಿದೆ.

ಆಲಮಟ್ಟಿ ಅಣೆಕಟ್ಟೆಯನ್ನು 524.225 ಮೀ.ಗೆ ಎತ್ತರಿಸಿ ಕರ್ನಾಟಕದ ಪಾಲಿನ 130 ಟಿಎಂಸಿ ನೀರು ಸದ್ಬಳಕೆ ಮಾಡಿಕೊಳ್ಳಬೇಕಾಗಿದೆ. ಯುಕೆಪಿಗೆ ಎಪ್ಪತ್ತರ ದಶಕದಲ್ಲಿ ಸಿಎಂ ಆಗಿದ್ದ ದೇವರಾಜ್ ಅರಸು ಅವರಿಂದ ಹಿಡಿದು ಈವರೆಗೆ ಅಧಿಕಾರ ನಡೆಸಿದ ಎಲ್ಲ ಸಿಎಂಗಳು ಸಾಧ್ಯವಾದಷ್ಟು ಅನುದಾನ ಮಂಜೂರು ಮಾಡುತ್ತಲೇ ಬಂದಿದ್ದಾರೆ. ಆದರೆ ಈ ಯೋಜನೆ ಅಂತರರಾಜ್ಯ ಜಲ ವಿವಾದವಾಗಿ ಮಾರ್ಪಟ್ಟಿರುವುದರಿಂದ ನಿಗದಿತ ಕಾಲಾವಧಿಯಲ್ಲಿ ಪೂರ್ಣಗೊಳಿಸದಿದ್ದರೆ ಕರ್ನಾಟಕದ ಪಾಲಿನ ನೀರು ಕೃಷ್ಣಾರ್ಪಣೆ ಆಗಿ ನೆರೆಯ ರಾಜ್ಯಗಳ ಪಾಲಾಗುವ ಆತಂಕ ಇದೆ. ಯೋಜನೆ ಈಗಾಗಲೇ ಸಾಕಷ್ಟು ವಿಳಂಬವಾಗಿದೆ. ಕರ್ನಾಟಕದ ಈ ವಿಳಂಬ ನಡೆಯನ್ನು ತಮಗೊಂದು ಸದವಕಾಶ ಎಂದು ಪರಿಗಣಿಸಿದ ನೆರೆಯ ಆಂಧ್ರಪ್ರದೇಶ, ತೆಲಂಗಾಣ ಮತ್ತು ಮಹಾರಾಷ್ಟ್ರ ರಾಜ್ಯಗಳು ಕರ್ನಾಟಕದ ಪಾಲಿನ ನೀರು ಕಬಳಿಸಲು ಸದ್ದುಗದ್ದಲವಿಲ್ಲದೆ ಕಾರ್ಯತಂತ್ರ ರೂಪಿಸಿವೆ.

ಇತ್ತ ಕರ್ನಾಟಕ ಸರ್ಕಾರ ಯುಕೆಪಿ ಮೂರನೇ ಹಂತದ ಯೋಜನೆಗೆ ಭೂಸ್ವಾಧೀನ ಮಾಡಿಕೊಳ್ಳಲು ಸಜ್ಜಾಗಿರುವಾಗಲೇ ಅತ್ತ ಆಂಧ್ರಪ್ರದೇಶ ಇದಕ್ಕೆ ತಕರಾರು ತೆಗೆದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದೆ. ರಾಜಕೀಯ ಕಾರಣಕ್ಕಾಗಿ ಆಂಧ್ರಪ್ರದೇಶದ ಪತ್ರವನ್ನು ಮಹತ್ವದ್ದು ಎಂದು ಪರಿಗಣಿಸಿದ ಕೇಂದ್ರ ಜಲಶಕ್ತಿ ಇಲಾಖೆ ಕರ್ನಾಟಕ ಸರ್ಕಾರಕ್ಕೆ ಪತ್ರ ಬರೆದು ಈ ಬಗ್ಗೆ ಸ್ಪಷ್ಟೀಕರಣ ಕೇಳಿದೆ. ಆಲಮಟ್ಟಿ ಅಣೆಕಟ್ಟೆಯ ಎತ್ತರ ಹೆಚ್ಚಿಸಲು ಬೇಕಾಗಿರುವ 1.33 ಲಕ್ಷ ಹೆ. ಜಮೀನನ್ನು ಒಂದೇ ಕಂತಿನಲ್ಲಿ ಸ್ವಾಧೀನ ಪಡಿಸಿಕೊಳ್ಳುವ ನಿರ್ಧಾರವನ್ನು ಕರ್ನಾಟಕ ಸರ್ಕಾರದ ಸಚಿವ ಸಂಪುಟ ಸಭೆಯಲ್ಲಿ ಈಗಾಗಲೇ ತೆಗೆದುಕೊಳ್ಳಲಾಗಿದೆ. ಈ ಭೂಸ್ವಾಧೀನಕ್ಕೆ ಅಂದಾಜು 76000 ಕೋಟಿ ರೂ. ಬೇಕಾಗಲಿದ್ದು, ಆ ಹಣವನ್ನು ರೈತರಿಗೆ ಮೂರು ಹಂತಗಳಲ್ಲಿ ಕೊಡಲು ಈ ಬಜೆಟ್ ನಲ್ಲಿ ಅನುದಾನ ಒದಗಿಸಲು ಸಿಎಂ ಪ್ಲ್ಯಾನ್ ಮಾಡಿದ್ದಾರೆ. ಈ ಅನುದಾನವನ್ನು ಈ ಸಲದ ಬಜೆಟ್ ನಲ್ಲಿ ತೆಗೆದಿರಿಸಬೇಕು ಎಂಬುದು ಜಮೀನು ಕಳೆದುಕೊಳ್ಳುವ ರೈತರ ಆಶಯವಾಗಿದೆ. ಈಗಾಗಲೇ 20,000 ಕೋಟಿ ರೂ. ವೆಚ್ಚವಾಗಿರುವ ಯುಕೆಪಿ ಇನ್ನೂ 76000 ಕೋಟಿ ರೂ. ಕೇಳುತ್ತಿದೆ. ಇದರಿಂದ ಇದು ಒಂದು ಲಕ್ಷ ಕೋಟಿ ರೂಪಾಯಿ ವೆಚ್ಚದ ದುಬಾರಿ ಯೋಜನೆಯಾಗಿದೆ. ಈ ಹಣವನ್ನು ಸಿಎಂ ಈ ಸಲದ ಬಜೆಟ್ ನಲ್ಲಿ ಹೇಗೆ ಕ್ರೋಢೀಕರಿಸಿ ಬಾಗಲಕೋಟೆ ಜಿಲ್ಲೆಯ ಜನರ ಬಹುದಿನಗಳ ಬೇಡಿಕೆ ಈಡೇರಿಸಬಹುದು ಎಂಬುದನ್ನು ಕಾದು ನೋಡಬೇಕಿದೆ.



ಇದಲ್ಲದೆ ಜಿಲ್ಲೆಯ ರೈತರಿಗೆ ನೀರಾವರಿ ಸೌಲಭ್ಯ ಒದಗಿಸುವ ಮಲಪ್ರಭಾ ಎಡದಂಡೆ ಕಾಲುವೆ ಮತ್ತು ಘಟಪ್ರಭಾ ಎಡದಂಡೆ ಹಾಗೂ ಬಲದಂಡೆ ಕಾಲುವೆಗಳ ಕಾಮಗಾರಿ ಪೂರ್ಣಗೊಳಿಸಿ ಟೇಲ್ ಎಂಡ್ ವರೆಗೂ ನೀರು ಹರಿಸಲು ಬಜೆಟ್ ನಲ್ಲಿ ಅನುದಾನ ಒದಗಿಸಬೇಕಾಗಿದೆ. ಕೆರೂರ ಏತ ನೀರಾವರಿ ಯೋಜನೆ ಹೆರಕಲ್ ಏತ ನೀರಾವರಿ ಯೋಜನೆ ಒಳಗೊಂಡು ಅಪೂರ್ಣ ಸ್ಥಿತಿಯಲ್ಲಿರುವ ವಿವಿಧ ಏತ ನೀರಾವರಿ ಯೋಜನೆಗಳಿಗೆ ಬಜೆಟ್ ನಲ್ಲಿ ಅನುದಾನ ತೆಗೆದಿರಿಸಿ ಅವುಗಳನ್ನು ಪೂರ್ಣಗೊಳಿಸಿದರೆ ಆಲಮಟ್ಟಿ ಜಲಾಶಯದ ಹಿನ್ನೀರು ಬರಪೀಡಿತ ಪ್ರದೇಶಗಳ ರೈತರ ಜಮೀನುಗಳಿಗೆ ಹರಿದು ಬರಲಿದೆ. ಜಿಲ್ಲೆಯಲ್ಲಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳಿಗೂ ಅನುದಾನ ಬೇಕಾಗಿದೆ. ಜಿಲ್ಲೆಯಲ್ಲಿ ವಿಪುಲ ಅವಕಾಶವಿರುವ ಪ್ರವಾಸೋದ್ಯಮ ಬೆಳೆಯಲು ಬಜೆಟ್ ನಲ್ಲಿ ಅನುದಾನ ಬೇಕಾಗಿದೆ.

ಚಾಲುಕ್ಯ ಉತ್ಸವಕ್ಕೆ ಪ್ರತಿ ವರ್ಷ ಬಜೆಟ್ ನಲ್ಲಿ 5 ಕೋಟಿ ರೂ. ಮೀಸಲಿಡಬೇಕೆಂಬುದು ಜಿಲ್ಲೆಯ ಜನರ ಬೇಡಿಕೆಯಾಗಿದೆ. ಜಿಲ್ಲೆಗೆ ಕಳೆದ ಸಾಲಿನಲ್ಲಿ ಮಂಜೂರು ಮಾಡಿರುವ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಬಜೆಟ್ ನಲ್ಲಿ ಕನಿಷ್ಠ 100 ಕೋಟಿ ರೂ. ಅನುದಾನದ ಅವಶ್ಯಕತೆ ಇದೆ. ಭೂಸ್ವಾಧೀನ ವಿಳಂಬದಿಂದ ಕುಂಟುತ್ತ ಸಾಗಿರುವ ರೈಲ್ವೆ ಯೋಜನೆಗಳಿಗೆ ಬಜೆಟ್ ನಲ್ಲಿ ಅನುದಾನ ತೆಗೆದಿರಿಸಬೇಕಾಗಿದೆ. ಹಲಗಲಿ ಬೇಡರು ಮತ್ತು ಸಿಂಧೂರ ಲಕ್ಷ್ಮಣ ಪ್ರಾಧಿಕಾರವನ್ನು ಸ್ಥಾಪನೆ ಮಾಡಿ ಬಜೆಟ್ ನಲ್ಲಿ ಅದಕ್ಕೆ ಹಣ ತೆಗೆದಿರಿಸಬೇಕೆಂಬ ಕೂಗು ಬಲವಾಗಿ ಕೇಳಿ ಬರುತ್ತಿದೆ. ಇದಲ್ಲದೆ ಜಿಲ್ಲೆಯಲ್ಲಿ ಕೈಗಾರಿಕೀಕರಣಕ್ಕೆ ಬಜೆಟ್ ನಲ್ಲಿ ಒತ್ತು ಕೊಡಬೇಕು ಎಂಬ ಬೇಡಿಕೆ ಇದೆ. ತೋಟಗಾರಿಕೆ ಉತ್ಪನ್ನಗಳು ವಿದೇಶಕ್ಕೆ ಹೋಗಲು ರೈತರಿಗೆ ಬೇಕಾದ ಮೂಲ ಸೌಕರ್ಯಗಳನ್ನು ಕಲ್ಪಿಸಲು ಬಜೆಟ್ ನಲ್ಲಿ ಅನುದಾನ ತೆಗೆದಿಡಬೇಕು ಎಂಬುದು ಸೇರಿದಂತೆ ಅನೇಕ ಬೇಡಿಕೆಗಳೊಂದಿಗೆ ಬಾಗಲಕೋಟೆ ಜಿಲ್ಲೆಯ ಜನ ಸಿಎಂ ಸಿದ್ದರಾಮಯ್ಯ ಅವರಿಂದ ಬಹಳಷ್ಟು ಅಪೇಕ್ಷೆ ಮಾಡಿದ್ದಾರೆ.

ತಮ್ಮ ಮೇಲೆ ವಿಶೇಷ ಅಭಿಮಾನ ಹೊಂದಿರುವ ಬಾಗಲಕೋಟೆ ಜಿಲ್ಲೆಯ ಜನರ ಭಾವನೆಗಳಿಗೆ ಸಿಎಂ ಯಾವ ರೀತಿ ಸ್ಪಂದಿಸಬಹುದು ಎಂಬುದಕ್ಕೆ ಶುಕ್ರವಾರ ಮಧ್ಯಾಹ್ನದ ಹೊತ್ತಿಗೆ ಸ್ಪಷ್ಟ ಚಿತ್ರಣ ಸಿಗಲಿದೆ.

ಜಿಲ್ಲೆಯಲ್ಲಿ ಕುರಿ ಸಾಕಾಣಿಕೆದಾರರಿಗೆ ಬಿಳಿ ಬಣ್ಣದ ಯಳಗ ಕುರಿ ತಳಿ ಲಾಭದಾಯಕ ಆಗಿರುವುದರಿಂದ ಬಾದಾಮಿ ತಾಲೂಕಿನ ಕುಳಗೇರಿ ಕ್ರಾಸ್ ನಲ್ಲಿ ಯಳಗ ತಳಿ ಕುರಿ ಸಂಶೋಧನೆ ಮತ್ತು ತರಬೇತಿ ಕೇಂದ್ರ ತೆರೆಯಬೇಕು. ಜಿಲ್ಲೆಯಲ್ಲಿ ನೇಕಾರರಿಗೆ ಉತ್ತೇಜನ ನೀಡಲು ರಬಕವಿ ಬನಹಟ್ಟಿ ಇಲ್ಲವೆ ಅಮೀನಗಡ ಸೂಳೆಭಾವಿ ಭಾಗದಲ್ಲಿ ಜವಳಿ ಪಾರ್ಕ್ ಸ್ಥಾಪನೆ ಮಾಡಬೇಕು. ಮಹಾದಾಯಿ ಯೋಜನೆಯಡಿ ಕಳಸಾ ಬಂಡೂರಿ ನಾಲಾ ನಿರ್ಮಾಣ ಕಾಮಗಾರಿಗೆ ವೇಗ ನೀಡಿದರೆ ಬಾದಾಮಿ ಗುಳೇದಗುಡ್ಡ ಹುನಗುಂದ ತಾಲ್ಲೂಕುಗಳು ನೀರಾವರಿ ಸೌಲಭ್ಯ ಹೊಂದಲಿವೆ ಎಂಬುದು ರೈತರ ಬೇಡಿಕೆಯಾಗಿದೆ.

ರಾಜ್ಯದಲ್ಲಿ ಬೇರೆ ಬೇರೆ ಕಡೆಗಳಲ್ಲಿ ಜಿಂಕೆ ವನ, ನವಿಲು ಧಾಮ, ಮೊಸಳೆ ಪಾರ್ಕ್,ಕರಡಿ ಧಾಮ ಮಾದರಿಯಲ್ಲಿ ಜಿಲ್ಲೆಯ ದಕ್ಷಿಣ ಭಾಗದ ಗುಡ್ಡಗಾಡು ಪ್ರದೇಶದಲ್ಲಿ ಹೆಚ್ಚು ಸಂಖ್ಯೆಯಲ್ಲಿರುವ ತೋಳಗಳ ಸಂತತಿ ಸಂರಕ್ಷಣೆಗೆ ತೋಳಗಳ ಪಾರ್ಕ್ ಸ್ಥಾಪಿಸಬೇಕು ಎಂಬುದು ವನ್ಯಜೀವಿ ಸಂರಕ್ಷಣಾ ಆಸಕ್ತರು ಮತ್ತು ಪರಿಸರವಾದಿಗಳು ಬೇಡಿಕೆಯಾಗಿದೆ. ಜಿಲ್ಲೆಯನ್ನು ನೆರೆಯ ಜಿಲ್ಲೆಗಳೊಂದಿಗೆ ಮತ್ತು ಮಹಾರಾಷ್ಟ್ರ ರಾಜ್ಯದ ಪ್ರಮುಖ ವಾಣಿಜ್ಯ ನಗರಗಳಿಗೆ ಸಂಪರ್ಕಿಸುವ ರಾಜ್ಯ ಹೆದ್ದಾರಿಗಳನ್ನು ಕೆಶಿಪ್ ಯೋಜನೆಯಡಿ ಅಭಿವೃದ್ಧಿ ಪಡಿಸಲು ಅನುದಾನ ಒದಗಿಸಬೇಕು. ಬಾದಾಮಿ ಪರಿಸರದಲ್ಲಿ ಶಿಲ್ಪಕಲೆ ಮತ್ತು ಲಲಿತ ಕಲಾ ವಿಶ್ವ ವಿದ್ಯಾಲಯದ ಆರಂಭಕ್ಕೆ ಬಜೆಟ್ ನಲ್ಲಿ ಅನುದಾನ ತೆಗೆದಿರಿಸಬೇಕು ಎಂಬುದು ಕೂಡ ಜಿಲ್ಲೆಯ ಕಲಾಸಕ್ತರ ಬೇಡಿಕೆಯಾಗಿದೆ.

ಹಣಕಾಸು ಖಾತೆ ಸಚಿವರಾಗಿ ಸಿಎಂ ಸಿದ್ದರಾಮಯ್ಯ ನಾಳೆ ಮಂಡಿಸಲಿರುವ ತಮ್ಮ 17ನೇ ಬಜೆಟ್ ನಲ್ಲಿ ಬಾಗಲಕೋಟೆ ಜಿಲ್ಲೆಯ ಈ ಎಲ್ಲ ಬೇಡಿಕೆಗಳ ಈಡೇರಿಕೆಗೆ ಸಂಪನ್ಮೂಲ ಒದಗಿಸಿ ಜಿಲ್ಲೆಯ ಜನರ ಆಶಯಗಳ ಸಾಕಾರಕ್ಕೆ ಸ್ಪಂದಿಸಬಹುದೋ ಇಲ್ಲವೋ ಎಂಬುದಕ್ಕೆ ನಾಳೆ ಉತ್ತರ ಸಿಗಲಿದೆ.

ಜಿಲ್ಲೆಯ ಜನರ ಆಸೆ ನಿರೀಕ್ಷೆ ಬೇಡಿಕೆಗಳೇನೋ ಬೆಟ್ಟದಷ್ಟಿವೆ. ಆದರೆ ರಾಜ್ಯ ಸರಕಾರದ ಇತಿಮಿತಿಯಲ್ಲಿ ಹಣಕಾಸು ಸಂಪನ್ಮೂಲ ಲಭ್ಯತೆಯ ಅವಕಾಶಗಳ ನಡುವೆ ಬಾಗಲಕೋಟೆ ಜಿಲ್ಲೆಗೆ ಏನು ಸಿಗುವುದೋ ಎಂಬುದನ್ನು ಕಾದು ನೋಡಬೇಕಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR